ಸಂಪುಟ : 9 ಸಂಚಿಕೆ 306 ಪುಟ : 4+2 ಬೆಲೆ: 3.00 ರವಿವಾರ ಜನವರಿ 19 2025 Mob : 9448326533- 9019256545 ಗದಗ

ಸಂಪಾದಕರು : ಎಚ್.ಎಮ್. ಶರೀಫನವರ್

# ವಿಜಯ ಸಾಕ್ಷಿ

ವಾಸ್ತವ, ವಸ್ತುನಿಷ್ಠ, ವಿಭಿನ್ನ...

VIJAYA SAKSHI KANNADA DAILY ಕನ್ನಡ ದಿನಪತ್ರಿಕೆ




Volume : 9 Issue : 306 Pages : 4+2 Price : 3.00 Sunday January 19 2025 Gadag RNI No: KARKAN/2015/63412 E-mail: vijayasakshidaily@gmail.com Post Regn.No: GDG/72/2023-25

## ದರಪಟ್ಟಿ ಆಹ್ವಾನ

■ ವಿಜಯಸಾಕ್ಷಿ ಸುದ್ದಿ, ಗದಗ

ಗದಗ ಜಿಲ್ಲಾ ಪಂಚಾಯತ್ ಅನಿರ್ಬಂಧಿತ ಅನುದಾನದಡಿಯಲ್ಲಿ 3 ವಸತಿ ನಿಲಯಗಳಲ್ಲಿ ಶುದ್ಧ ಕುಡಿಯುವ ನೀರಿನ ಘಟಕ (1000 ಲೀ) ಅಳವಡಿಸಲು ಅರ್ಹ ಸರಬರಾಜುದಾರರಿಂದ ದರಪಟ್ಟಿಯನ್ನು ಆಹ್ವಾನಿಸಲಾಗಿದೆ.

ಆಸಕ್ತ ಪೂರೈಕೆದಾರರು ಜನವರಿ 24ರ ಮಧ್ಯಾಹ್ನ 3 ಗಂಟೆಯೊಳಗಾಗಿ (ರಜಾ ದಿನಗಳನ್ನು ಹೊರತುಪಡಿಸಿ) ದರಪಟ್ಟಿಯನ್ನು ಸಲ್ಲಿಸಬೇಕು. ದರ ನಮೂದಿಸುವಾಗ ಸಾಗಾಣಿಕೆ ವೆಚ್ಚ ಹಾಗೂ ತೆ-ರಿಗೆ ಒಳಗೊಂಡಂತೆ ದರವನ್ನು ನಮೂದಿಸುವುದು. ದರಪಟ್ಟಿಯನ್ನು ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು, ಜಿಲ್ಲಾ ಪಂಚಾಯತ್ ಗದಗ ಇವರ ಹೆಸರಿನಲ್ಲಿ ನೀಡತಕ್ಕದ್ದು. ಹೆಚ್ಚಿನ ಮಾಹಿತಿಗಾಗಿ ಜಿಲ್ಲಾ ಪಂಚಾಯತಿಯ ಮುಖ್ಯ ಯೋಜನಾಧಿಕಾರಿಗಳ ಮೊಬೈಲ್-9480865004ನ್ನು ಸಂಪರ್ಕಿಸಿ ಪಡೆಯಬಹುದಾಗಿದೆ.

## ಭ್ರಷ್ಟಾಚಾರದಿಂದ ಸಿದ್ದರಾಮಯ್ಯ ಸಾಕಷ್ಟು ಬೇನಾಮಿ ಆಸ್ತಿ ಮಾಡಿದ್ದಾರೆ: ಜನಾರ್ದನ್ ರೆಡ್ಡಿ!

■ ವಿಜಯಸಾಕ್ಷಿ ಸುದ್ದಿ, ಕೊಪ್ಪಳ

ಕರ್ನಾಟಕದಲ್ಲಿ ಅತಿ ಹೆಚ್ಚು ಭ್ರಷ್ಟಾಚಾರ ಮಾಡಿದ ಸಿಎಂ ಪಟ್ಟಿಯಲ್ಲಿ ಸಿದ್ದರಾಮಯ್ಯ ಮೊದಲಿಗರು ಎಂದು ಜನಾರ್ದನ್ ರೆಡ್ಡಿ ಲೇವಡಿ ಮಾಡಿದ್ದಾರೆ.

ಈ ಸಂಬಂಧ ಮಾತನಾಡಿದ ಅವರು, ರಾಜ್ಯದಲ್ಲಿ ಅತಿಹೆಚ್ಚು ಭ್ರಷ್ಟಾಚಾರ ಮಾಡಿದ ಮುಖ್ಯಮಂತ್ರಿಗಳು ಅಂದರೆ ಸಿದ್ದರಾಮಯ್ಯನವರು, ಭ್ರಷ್ಟಾಚಾರದಿಂದ ಸಾಕಷ್ಟು ಬೇನಾಮಿ ಆಸ್ತಿಯನ್ನು ಮಾಡಿಕೊಂಡಿದ್ದಾರೆ ಎಂದರು. ರಾಜ್ಯದಲ್ಲಿನ ಮುಖ್ಯಮಂತ್ರಿಗಳ ಪಟ್ಟಿಯಲ್ಲಿ ಸಿದ್ದರಾಮಯ್ಯನವರು ಅತಿಹೆಚ್ಚು ಭ್ರಷ್ಟಾಚಾರ ಮಾಡಿದ ಸಿಎಂ ಆಗಿದ್ದಾರೆ.

ರಾಜ್ಯದಲ್ಲಿ ಮುಡಾ ಹಗರಣದಲ್ಲಿ ಕೇವಲ 14 ಸೈಟ್‌ಗಳು ಮಾತ್ರವಲ್ಲದೆ ಸಾವಿರಕ್ಕೂ ಅಧಿಕ ಸೈಟ್‌ಗಳನ್ನು ಬೇನಾಮಿ ಆಸ್ತಿಯಾಗಿ ಮಾಡಿಕೊಂಡಿದ್ದಾರೆ. ಮುಡಾದಲ್ಲಿ ಸೈಟ್ ಖರೀದಿ ಮಾಡಿರುವವರನ್ನು ವಿಚಾರಣೆ ಮಾಡಿದರೆ ಸತ್ಯಾಂಶ ಹೊರಬರಲಿದೆ. ಜನರಲ್ಲಿ ಹಿಂದುಳಿದ ನಾಯಕ ಎಂದು ನಂಬಿಕೆಯನ್ನು ಹುಟ್ಟಿಸಿಕೊಂಡು ಮಾಡಿರುವ ಭ್ರಷ್ಟಾಚಾರ ಮುಡಾ ಹಗರಣದಿಂದ ಹೊರ ಬಂದಿದೆ ಎಂದು ಕಿಡಿಕಾರಿದರು. ಮುಡಾ ಹಗರಣ ರಾಜ್ಯದಲ್ಲಿಯೇ ಇದೊಂದು ದೊಡ್ಡ ಸ್ಕ್ಯಾಮ್ ಆಗಿದೆ. ಇದಷ್ಟೇ ಅಲ್ಲದೆ ಮೈಸೂರಿನ ಸಾಕಷ್ಟು ಲೇಔಟ್‌ಗಳ ತನಿಖೆ ನಡೆಸಬೇಕು.

ಇದು ಕಾಂಗ್ರೆಸ್ ಹೈಕಮಾಂಡ್ ಗಮನಕ್ಕೆ ಇದ್ದರೂ ಕೂಡ ಕ್ರಮಕ್ಕೆ ಮುಂದಾಗದೆ ಸುಮ್ಮನೆ ಇದ್ದಾರೆ. ಹೈಕಮಾಂಡ್ ಯಾಕೆ ಕ್ರಮಕ್ಕೆ ಮುಂದಾಗದೆ ಸುಮ್ಮನಿದೆ ಎನ್ನುವುದು ಗೊತ್ತಿಲ್ಲ. ಆದರೆ ರಾಜ್ಯದ ಜನರಿಗೆ ಸಿದ್ದರಾಮಯ್ಯ ಮಾಡಿರುವ ಮುಡಾ ಹಗರಣದಲ್ಲಿನ ಸತ್ಯಾಂಶ ದಿನ ದಿನೇ ಗೊತ್ತಾಗುತ್ತಿದೆ.

### ಗದಗ ಸೇರಿದಂತೆ ವಿವಿಧ ಜಿಲ್ಲೆಗಳ ಒಟ್ಟು 18 ಪ್ರಕರಣದಲ್ಲಿ ಭಾಗಿಯಾಗಿದ್ದ ಆರೋಪಿಗಳು

# ಪೊಲೀಸರಿಂದ ಇಬ್ಬರು ದರೋಡೆಕೋರರ ಬಂಧನ

■ ವಿಜಯಸಾಕ್ಷಿ ಸುದ್ದಿ, ಗದಗ

ಜಿಲ್ಲೆಯ ಮುಂಡರಗಿ ತಾಲೂಕು ವ್ಯಾಪ್ತಿಯಲ್ಲಿ ನಡೆದ ದರೋಡೆ ಪ್ರಕರಣಕ್ಕೆ ಸಂಬಂಧಿಸಿದಂತೆ ಇಬ್ಬರನ್ನು ಬಂಧಿಸಲಾಗಿದ್ದು, ಇನ್ನುಳಿದ ಐವರ ಪತ್ತೆಗೆ ವಿಶೇಷ ತಂಡ ರಚಿಸಲಾಗಿದೆ ಎಂದು ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಬಿ.ಎಸ್. ನೇಮಗೌಡ ಹೇಳಿದರು.

ಶನಿವಾರ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿಗಳ ಕಚೇರಿಯಲ್ಲಿ ನಡೆದ ಸುದ್ದಿಗೋಷ್ಠಿಯಲ್ಲಿ ಮಾಹಿತಿ ನೀಡಿದ ಅವರು, ಮುಂಡರಗಿ ಹಾಗೂ ತಾಲೂಕಿನ ಹಿರೇವಡ್ಡಟ್ಟಿ ಗ್ರಾಮದ ವ್ಯಾಪ್ತಿಯಲ್ಲಿ ನಡೆದ 5 ಪ್ರತ್ಯೇಕ ದರೋಡೆ, ಮನೆ ಕಳ್ಳತನ ಹಾಗೂ ಬೈಕ್ ಕಳ್ಳತನ ಪ್ರಕರಣಕ್ಕೆ ಸಂಬಂಧಿಸಿದಂತೆ ಜಿಲ್ಲೆಯ ಶಿರಹಟ್ಟಿ ತಾಲೂಕಿನ ಬೆಳ್ಳಟ್ಟಿ ಗ್ರಾಮದ ಬಸವರಾಜ ತಂದೆ ಯಲ್ಲಪ್ಪ ಮೋಡಿಕೇರ (21) ಹಾಗೂ ಶಿರಹಟ್ಟಿ ನಗರದ ಚಿರಂಜೀವಿ ತಂದೆ ದುರಗಪ್ಪ ಮೋಡಿಕೇರ (22) ಎಂಬಿಬ್ಬರನ್ನು ಬಂಧಿಸಲಾಗಿದೆ. ಇವರ ಸಂಗಡಿಗರಾದ ಇನ್ನು ಐದು ಜನ ಆರೋಪಿಗಳ ಪತ್ತೆ ಕಾರ್ಯ ನಡೆಯುತ್ತಿದೆ ಎಂದರು.






ತನಿಖೆ ವೇಳೆ ಈ ಇಬ್ಬರು ಆರೋಪಿಗಳು ತುಮಕೂರು, ಮಂಡ್ಯ, ಚಿಕ್ಕಮಗಳೂರು ಜಿಲ್ಲೆಯ ವ್ಯಾಪ್ತಿಯಲ್ಲಿ ನಡೆದ ಮನೆ ಕಳ್ಳತನ, ದರೋಡೆ, ವಾಹನ ಕಳ್ಳತನ ಪ್ರಕರಣದಲ್ಲಿಯೂ ಭಾಗಿಯಾಗಿರುವುದು ತಿಳಿದುಬಂದಿದೆ. ಈ ಆರೋಪಿಗಳ ಮೇಲೆ ಗದಗ ಜಿಲ್ಲೆಯ ಮೂರು ಪ್ರಕರಣ ಸಹಿತ ಒಟ್ಟ 18 ಪ್ರಕರಣಗಳು ದಾಖಲಾಗಿವೆ. ಈ ತಂಡ ಹೆದ್ದಾರಿ ಬಳಿ ಧಾಬಾ, ಒಂಟಿ ಲಾರಿಗಳು ನಿಂತಿರುವಾಗ ಚಾಲಕರ ಮೇಲೆ ದಾಳಿ ಮಾಡಿ ಹಣ ದೋಚಿ ಪರಾರಿಯಾಗುತ್ತಿದ್ದರು ಎಂದು ತಿಳಿಸಿದರು.

ಬಂಧಿತರಿಂದ ಕೃತ್ಯಕ್ಕೆ ಬಳಸಿದ ಬೊಲೇರೊ ಪಿಕಪ್ ಗೂಡ್ಸ್ ವಾಹನ, 1500 ರೂ. ನಗದು, 7.20 ಲಕ್ಷ ರೂ ಮೌಲ್ಯದ ಬಂಗಾರದ ಆಭರಣ ವಶಪಡಿಸಿಕೊಳ್ಳಲಾಗಿದೆ. ಹೆಚ್ಚುವರಿ ಪೊಲೀಸ್ ಅಧೀಕ್ಷಕ ಎಂ.ಬಿ. ಸಂಕದ, ಡಿಎಸ್‌ಪಿ ಪ್ರಭುಗೌಡ, ಪೊಲೀಸ್ ಇನ್ಸಪೆಕ್ಟರ್ ಮಂಜುನಾಥ ಕುಸುಗಲ್, ಪಿಎಸ್‌ಐ ಪವಾರ, ಬಿ.ಎನ್. ಯಳವತ್ತಿ ಹಾಗೂ ಸಿಬ್ಬಂದಿ ತನಿಖೆ ನಡೆಸಿ ಆರೋಪಿಗಳನ್ನು ಬಂಧಿಸುವಲ್ಲಿ ಯಶಸ್ವಿಯಾಗಿದ್ದಾರೆ ಎಂದು ಮಾಹಿತಿ ನೀಡಿದರು.

22 ಲಕ್ಷ ರೂ ಮೌಲ್ಯದ ಮೊಬೈಲ್ ವಶ

ಈಲ್ಲೆಯಲ್ಲಿ 126 ಮೊಬೈಲ್ ಕಳ್ಳತನ ಪ್ರಕರಣ ಬೇಧಿಸಿರುವ ಕುರಿತು ಮಾಹಿತಿ ನೀಡಿದ ಪೊಲೀಸ್ ವರಿಷ್ಠಾಧಿಕಾರಿ ಬಿ.ಎಸ್. ನೇಮಗೌಡ, ಒಟ್ಟು 22 ಲಕ್ಷ ಮೌಲ್ಯದ 116 ಮೊಬೈಲ್ ಪತ್ತೆ ಹಚ್ಚಿ ಮಾಲೀಕರಿಗೆ ವಿತರಿಸಲಾಗಿದೆ. ಕಳುವಾದ ಮೊಬೈಲ್ ಪತ್ತೆಯಲ್ಲಿ ಗದಗ ಜಿಲ್ಲೆ ಉತ್ತಮ ಸ್ಥಾನದಲ್ಲಿದೆ ಎಂದರು.




### ಗಜೇಂದ್ರಗಡದಲ್ಲಿ ನಡೆಯಲಿರುವ ವಿಶಿಷ್ಟ ಸಾಹಿತ್ಯ ಸಮ್ಮೇಳನದಲ್ಲಿ ಪಾಲ್ಗೊಳ್ಳಲು ಶಾಸಕ ಜಿ.ಎಸ್. ಪಾಟೀಲ ಕರೆ

# ಸಾಹಿತ್ಯ ಜ್ಞಾನ ಎದೆಯ ಆಳಕ್ಕಿಳಿಯಲಿ

■ ವಿಜಯಸಾಕ್ಷಿ ಸುದ್ದಿ, ಡಂಬಳ

ಸಾಹಿತ್ಯ ಸಮ್ಮೇಳನ ಎಂದರೆ ಅದೊಂದು ವಿಶಿಷ್ಟ ಬಗೆಯ ಸಂಭ್ರಮ. ಅದರಲ್ಲೂ ಕನ್ನಡ ಸಾಹಿತ್ಯ ಸಮ್ಮೇಳನ ಎಂದಾಕ್ಷಣ ನಮ್ಮ ಮೈಮನಗಳೆಲ್ಲ ರೋಮಾಂಚನವಾಗುತ್ತದೆ. ಹೇಳಿ ಕೇಳಿ ಮುದ್ರಣ ಕಾಶಿ ಎಂದೇ ಪ್ರಖ್ಯಾತವಾಗಿರುವ ಗದಗ ಜಿಲ್ಲೆಯ ಗಜೇಂದ್ರಗಡದ ಕನ್ನಡದ ತವರಿನಲ್ಲಿ ಜ.20, 21ರಂದು ನಡೆಯುವ ಕನ್ನಡ ಸಾಹಿತ್ಯ ಸಮ್ಮೇಳನದಲ್ಲಿ ಪ್ರತಿಯೊಬ್ಬರೂ ಪಾಲಗೊಳ್ಳಬೇಕು. ಏಕೆಂದರೆ ಕನ್ನಡದ ಉಳಿವು ಇರುವುದೇ ಅದರ ಬಳಕೆಯಲ್ಲಿ ಎಂದು ರೋಣ ಮತಕ್ಷೇತ್ರದ ಶಾಸಕ ಜಿ.ಎಸ್. ಪಾಟೀಲ ಅಭಿಪ್ರಾಯಪಟ್ಟಿದ್ದಾರೆ.



ಈ ಕುರಿತು ಪತ್ರಿಕಾ ಹೇಳಿಕೆ ನೀಡಿರುವ ಅವರು, ಇಂದಿನ ಜನಾಂಗ ಆಂಗ್ಲ ಭಾಷೆಯ ಮೊರೆ ಹೋಗುತ್ತಿರುವುದರಿಂದ ಮುಂದಿನ ಜನಾಂಗ ಕನ್ನಡವನ್ನು ಮರೆತುಬಿಡುವ ಅಪಾಯವಿದೆ. ಹಾಗಾಗಿ ನಮ್ಮ ಗದಗ ಜಿಲ್ಲೆಯ ಗಜೇಂದ್ರಗಡದಲ್ಲಿ ನಡೆಯುವ ಜಿಲ್ಲಾ ಕನ್ನಡ ಸಾಹಿತ್ಯ ಸಮ್ಮೇಳನದಿಂದ ಯುವ ಜನಾಂಗ ಮತ್ತು ಪುಟ್ಟ ಮಕ್ಕಳಲ್ಲಿ ಭಾಷಾ ಪ್ರೀತಿಯನ್ನು ಹೆಚ್ಚು ಬೆಳೆಸುವಂತೆ ಆಗಬೇಕು. ಕನ್ನಡ ಎಂದಾಕ್ಷಣ ಅದು ನನ್ನದು, ನನ್ನ ತಾಯಿ ಭಾಷೆ ಎನ್ನುವ ಅಭಿಮಾನ, ಹೆಮ್ಮೆ ಮೈದೋರುವಂತೆ ಸಾಹಿತ್ಯ ಸಮ್ಮೇಳನ ರೂಪುಗೊಳ್ಳಬೇಕು.

ಯಾವುದೇ ಭಾಷೆಯ ಮೇಲೆ ಪ್ರೀತಿ ಇರದಿದ್ದರೆ, ಬಳಸದಿದ್ದರೆ ಅದು ಬೆಳೆಯುವುದಿಲ್ಲ. ಹಾಗೆ ಬೆಳೆಯಬೇಕಾದರೆ ನಾವೆಲ್ಲ ಒಮ್ಮನದಿಂದ ಇಂತಹ ಸಮ್ಮೇಳನಗಳಲ್ಲಿ ಪಾಲ್ಗೊಂಡು ನಮ್ಮ ಭಾಷಾ ಜ್ಞಾನವನ್ನು ವಿಸ್ತರಿಸಿಕೊಳ್ಳುತ್ತಾ ಹೋಗಬೇಕಾಗಿದೆ. ಹಾಗೆ ಭಾಷಾಜ್ಞಾನ ವಿಸ್ತರಿಸುವ ವಿಚಾರಗಳು ಸಮ್ಮೇಳನದಲ್ಲಿ ಚರ್ಚಿತವಾಗುತ್ತವೆ ಎನ್ನುವ ಆಶಾ ಭಾವನೆಯಿದೆ. ಭಾಷಾಜ್ಞಾನ ಮಾತ್ರವಲ್ಲದೆ ಸಾಹಿತ್ಯ ಜ್ಞಾನವೂ ಎದೆಯ ಆಳಕ್ಕಿಳಿಯಬೇಕು.

ಹಾಗೆಯೇ ಸಾಹಿತ್ಯ ಎನ್ನುವುದು ಎದೆಗೆ ಇಳಿದಾಗ ಸಹೃದಯತೆ, ಸಂಸ್ಕಾರ ತಾನೇ ತಾನಾಗಿ ಮೈದಾಳುತ್ತದೆ. ಹಾಗೆ ಎದೆಗೆ ಸಂಸ್ಕಾರ ನೀಡುವಂತಹ ಅಕ್ಷರ ಪ್ರೀತಿಯನ್ನು ಈ ಸಮ್ಮೇಳನ ನೀಡುವಂತಾಗಲಿ ಎಂಬುದು ನಮ್ಮೆಲ್ಲರ ಸದಾಶಯ. ಹಾಗಾಗಿ ಸಾಹಿತ್ಯ ಸಮ್ಮೇಳನದಲ್ಲಿ ಪ್ರತಿಯೊಬ್ಬರೂ ಪಾಲ್ಗೊಳ್ಳಿ. ಕನ್ನಡವನ್ನು ಉಳಿಸೋಣ, ಬೆಳೆಸೋಣ. ಅದರಲ್ಲಿ ಮಿಂದು ತಲ್ಲೀನರಾಗೋಣ ಬನ್ನಿ. ಕನ್ನಡನಾಡಿನ ಕನ್ನಡವನ್ನು ಗಜೇಂದ್ರಗಡದಲ್ಲಿ ಯಶಸ್ವಿಯಾಗಿಸೋಣ ಎಂದು ಶಾಸಕ ಜಿ.ಎಸ್. ಪಾಟೀಲರು ಕರೆ ನೀಡಿದ್ದಾರೆ.

### ಕಾರ್ಮಿಕ ಸಚಿವ, ಜಿಲ್ಲಾ ಉಸ್ತುವಾರಿ ಸಚಿವ ಸಂತೋಷ ಲಾಡ್‌ರಿಂದ ಕಾರ್ಯಕ್ರಮ ಉದ್ಘಾಟನೆ

## ಮಹಾಯೋಗಿ ಶ್ರೀ ವೇಮನ ಜಯಂತಿ ಆಚರಣೆ ಇಂದು

■ ವಿಜಯಸಾಕ್ಷಿ ಸುದ್ದಿ, ಧಾರವಾಡ

ಜಿಲ್ಲಾಡಳಿತ ಹಾಗೂ ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಸಂಯುಕ್ತ ಆಶ್ರಯದಲ್ಲಿ ಮಹಾಯೋಗಿ ಶ್ರೀ ವೇಮನ ಜಯಂತಿಯನ್ನು ಜ.19ರಂದು ಬೆಳಿಗ್ಗೆ 11 ಗಂಟೆಗೆ ಕರ್ನಾಟಕ ಕುಲಪುರೋಹಿತ ಆಲೂರು ವೆಂಕಟರಾವ್ ಸಾಂಸ್ಕೃತಿಕ ಭವನದಲ್ಲಿ ಆಯೋಜಿಸಲಾಗಿದೆ.

ಕೇಂದ್ರ ಗ್ರಾಹಕರ ವ್ಯವಹಾರಗಳ, ಆಹಾರ ಮತ್ತು ಸಾರ್ವಜನಿಕ ವಿತರಣೆ ಮತ್ತು ಹೊಸ ಹಾಗೂ ನವೀಕರಿಸಬಹುದಾದ ಇಂಧನ ಸಚಿವ ಪ್ರಲ್ಹಾದ ಜೋಶಿ ಹಾಗೂ ವಿಧಾನ ಪರಿಷತ್ತಿನ ಸಭಾಪತಿ ಬಸವರಾಜ ಹೊರಟ್ಟಿ ಅವರು ಕಾರ್ಯಕ್ರಮದಲ್ಲಿ ಘನ ಉಪಸ್ಥಿತಿ ವಹಿಸುವರು.

ಕಾರ್ಮಿಕ ಸಚಿವ ಹಾಗೂ ಜಿಲ್ಲಾ ಉಸ್ತುವಾರಿ ಸಚಿವರಾದ ಸಂತೋಷ ಎಸ್.ಲಾಡ್ ಕಾರ್ಯಕ್ರಮವನ್ನು ಉದ್ಘಾಟಿಸುವರು. ಕರ್ನಾಟಕ ವಿಧಾನ ಪರಿಷತ್ ಸರ್ಕಾರಿ ಮುಖ್ಯ ಸಚೇತಕ ಸಲೀಂ ಅಹ್ಮದ, ಶಾಸಕರು ಹಾಗೂ ಕರ್ನಾಟಕ ನಗರ ನೀರು ಸರಬರಾಜು ಮತ್ತು ಒಳ ಚರಂಡಿ ಮಂಡಳಿಯ ಅಧ್ಯಕ್ಷ ವಿನಯ ಕುಲಕರ್ಣಿ, ಶಾಸಕ ಹಾಗೂ ಕರ್ನಾಟಕ ಕೊಳಚೆ ಅಭಿವೃದ್ಧಿ ಮಂಡಳಿ ಅಧ್ಯಕ್ಷ ಅಬ್ಬಯ್ಯ ಪ್ರಸಾದ, ಶಾಸಕ ಹಾಗೂ ವಾಯವ್ಯ ಸಾರಿಗೆ ನಿಗಮದ ಅಧ್ಯಕ್ಷ ಭರಮಗೌಡ ಅಲಗೌಡ ಕಾಗೆ, ಶಾಸಕರು ಹಾಗೂ ಕರ್ನಾಟಕ ಕೈಮಗ್ಗ ಅಭಿವೃದ್ಧಿ ನಿಗಮದ ಅಧ್ಯಕ್ಷರಾದ ಜೆ.ಎನ್.ಗಣೇಶ, ಹುಬ್ಬಳ್ಳಿ ವಿದ್ಯುತ್ ಸರಬರಾಜು ಕಂಪನಿ ನಿಯಮಿತ ಅಧ್ಯಕ್ಷ ಸೈಯದ್ ಅಜೀಮ್‌ಪೀರ್ ಎಸ್. ಖಾದ್ರಿ ಅವರು ವಿಶೇಷ ಅತಿಥಿಗಳಾಗಿ ಭಾಗವಹಿಸುವರು.

ಶಾಸಕ ಅರವಿಂದ ಚಂದ್ರಕಾಂತ ಬೆಲ್ಲದ ಕಾರ್ಯಕ್ರಮದ ಅಧ್ಯಕ್ಷತೆ ವಹಿಸುವರು. ಮುಖ್ಯ ಅತಿಥಿಗಳಾಗಿ ಶಾಸಕರಾದ ಎನ್.ಎಚ್. ಕೋನರಡ್ಡಿ, ಎಸ್.ವ್ಹಿ. ಸಂಕನೂರ, ಪ್ರದೀಪ ಶೆಟ್ಟರ, ಮಹೇಶ ಟೆಂಗಿನಕಾಯಿ, ಎಂ.ಆರ್. ಪಾಟೀಲ್, ಕರ್ನಾಟಕ ಬಾಲವಿಕಾಸ ಅಕಾಡೆಮಿಯ ಅಧ್ಯಕ್ಷ ಸಂಗಮೇಶ ಅಪ್ಪಾಸಿ ಬಬಲೇಶ್ವರ, ಹುಬ್ಬಳ್ಳಿ-ಧಾರವಾಡ ಮಹಾನಗರ ಪಾಲಿಕೆಯ ಮಹಾಪೌರರಾದ ರಾಮಪ್ಪ ಕೃಷ್ಣಪ್ಪ ಬಡಿಗೇರ, ಹುಬ್ಬಳ್ಳಿ - ಧಾರವಾಡ ನಗರಾಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷ ಶಾಕಿರ್ ಸನದಿ ಮುಖ್ಯ ಅತಿಥಿಗಳಾಗಿ ಭಾಗವಹಿಸುವರು. ಕಾರ್ಯಕ್ರಮದಲ್ಲಿ ಜಿಲ್ಲಾಧಿಕಾರಿ ದಿವ್ಯ ಪ್ರಭು, ಹುಬ್ಬಳ್ಳಿ ಧಾರವಾಡ ಮಹಾನಗರ ಪೊಲೀಸ್ ಆಯುಕ್ತ ಎನ್.ಶಶಿಕುಮಾರ, ಜಿ.ಪಂ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಸ್ವರೂಪ ಟಿ.ಕೆ., ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಡಾ. ಗೋಪಾಲ ಎಂ.ಬ್ಯಾಕೋಡ್, ಹುಬ್ಬಳ್ಳಿ-ಧಾರವಾಡ ಮಹಾನಗರ ಪಾಲಿಕೆ ಆಯುಕ್ತ ಡಾ. ಈಶ್ವರ ಉಳ್ಳಾಗಡ್ಡಿ ಅವರು ಭಾಗವಹಿಸುವರೆಂದು ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಸಹಾಯಕ ನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಕರ್ನಾಟಕ ವಿಶ್ವವಿದ್ಯಾಲಯದ ಸ್ನಾತಕೋತ್ತರ ಶಿಕ್ಷಣ ವಿಭಾಗದ ಡೀನ್ ಮತ್ತು ಮುಖ್ಯಸ್ಥ ಡಾ. ಅರವಿಂದ ವಿ.ಕರಿಬಸನಗೌಡ್ರ ಹಾಗೂ ಕಲಘಟಗಿ ತಾಲೂಕಿನ ಜೋಡಳ್ಳಿ ಗ್ರಾಮದ ಶಿಕ್ಷಕ ಡಾ. ವಸಂತಮಾಲಾ ಮಂಜುನಾಥ ಪಾಟೀಲ ಅವರು ಕಾರ್ಯಕ್ರಮದಲ್ಲಿ ವಿಶೇಷ ಉಪನ್ಯಾಸ ನೀಡುವರು. ಕಾರ್ಯಕ್ರಮದಲ್ಲಿ ಶ್ರೀ ವೇಕಟೇಶ್ವರ ದೇವಸ್ಥಾನ ಸಮಿತಿಯ ಅಧ್ಯಕ್ಷ ಡಾ. ಅಜ್ಜಣ್ಣ ಅಳಗವಾಡಿ, ಸಮಾಜದ ಹಿರಿಯ ಮುಖಂಡರು ಪಾಲ್ಗೊಳ್ಳುವರು.

## ನಕಲಿ ಪೋಸ್ಟ್ ಮಾಸ್ಟರ್‌ನಿಂದ ಲಕ್ಷಾಂತರ ರೂಪಾಯಿ ಲೂಟಿ: ಹಣ ಕಳೆದುಕೊಂಡು ಕಂಗಾಲಾದ ಮಂಡ್ಯ ಜನ!

■ ವಿಜಯಸಾಕ್ಷಿ ಸುದ್ದಿ, ಮಂಡ್ಯ

ಗ್ರಾಮೀಣ ಪ್ರದೇಶದ ಮುಗ್ಧರು, ಅಮಾಯಕರಿಗೆ ಲಕ್ಷಾಂತರ ರೂಪಾಯಿ ವಂಚಿಸಿ ನಕಲಿ ಪೋಸ್ಟ್ ಮಾಸ್ಟರ್ ಎಸ್ಕೇಪ್ ಆಗಿರುವ ಘಟನೆ ಮಂಡ್ಯ ಜಿಲ್ಲೆಯ ನಾಗಮಂಗಲ ತಾಲೂಕಿನ ಬಿದರಕೆರೆ ಗ್ರಾಮದ ಅಂಚೆ ಕಚೇರಿಯಲ್ಲಿ ಜರುಗಿದೆ.

ದೊರೆಸ್ವಾಮಿ ರಾಜು ಎಂಬಾತ ಗ್ರಾಮದ ಸಾಕಷ್ಟು ಜನರ ಠೇವಣಿ ಹಣ, ಖಾತೆಯಲ್ಲಿದ್ದ ಹಣ, ಪಿಂಚಣಿ, ಗೃಹಲಕ್ಷ್ಮೀ ಹಣವನ್ನೆಲ್ಲ ಲಪಟಾಯಿಸಿ ಊರು ತೊರೆದು ಎಸ್ಕೇಪ್ ಆಗಿದ್ದಾನೆ. ಇವನ ಮೋಸದ ಜಾಲಕ್ಕೆ ಸಿಲುಕಿದ ಹಲವರು ಹಣ ಕಳೆದುಕೊಂಡು ಕಂಗಾಲಾಗಿದ್ದಾರೆ.

ಪತಿ ಮರಣದ ನಂತರ ಅನುಕಂಪದ ಆಧಾರದಲ್ಲಿ ಸುಧಾ ಎಂಬ ಮಹಿಳೆ ನೌಕರಿ ಪಡೆದಿದ್ದರು. ತಾಯಿ ಕೆಲಸವನ್ನು ಆರೋಪಿ ರಾಜು ತಾನೇ ಂಃಕಒ ಆಗಿ ಕೆಲಸ ಮಾಡ್ತಿದ್ದ. ತಾನೇ ಖಾಯಂ ಅಸಿಸ್ಟೆಂಟ್ ಬ್ರಾಂಚ್ ಪೋಸ್ಟ್ ಮಾಸ್ಟರ್ ಎಂಬಂತೆ ಬಿಂಬಿಸಿಕೊಳ್ತಿದ್ದ. ಇದೇ ರಾಜು ಎಂಬುವನನ್ನು ನಂಬಿ ಅಂಚೆ ಕಚೇರಿಯಲ್ಲಿ ಸಾಕಷ್ಟು ಜನರು ಠೇವಣಿ ಇಡುತ್ತಿದ್ದರು. ಆದರೆ ಈ ಠೇವಣಿ ಇಟ್ಟ ಹಣಕ್ಕೆ ರಶೀದಿ ಆಗಲಿ ಅಥವಾ ಯಾವುದೇ ದಾಖಲೆ ನೀಡದೆ ನಿತ್ಯವೂ ಸಬೂಬು ಹೇಳಿ ಜನರನ್ನು ಕಳಿಸುತ್ತಿದ್ದ.

ಅಲ್ಲದೇ ಒಂದೇ ಬಾರಿ ಮಹಿಳೆಯೊಬ್ಬರ 4 ಲಕ್ಷ ಹಣ ಪೀಕಿ ವಂಚನೆ ಎಸಗಿದ್ದ. ಕೊಟ್ಟ ಹಣಕ್ಕೆ ರಶೀದಿ ಕೊಡದೆ ಸತಾಯಿಸುತ್ತಿದ್ದಾಗ ಈತನ ವಂಚನೆ ಬೆಳಕಿಗೆ ಬಂದಿದೆ. ಹಣಕ್ಕಾಗಿ ಒತ್ತಡ ಹೆಚ್ಚಾಗುತ್ತಿದ್ದಂತೆ ರಾಜು ಊರು ಬಿಟ್ಟು ಪರಾರಿಯಾಗಿದ್ದಾನೆ. ಇನ್ನೂ 4 ಲಕ್ಷ ವಂಚನೆ ಬಯಲಾಗ್ತಿದ್ದಂತೆ ಒಂದೊಂದೇ ಪ್ರಕರಣ ಬಯಲಿಗೆ ಬಂದಿದೆ. ಇನ್ನೂ ಮೋಸಕ್ಕೆ ಒಳಗಾದವರು ರಾಜು ವಂಚನೆ ವಿರುದ್ಧ ಇಲಾಖೆ ಅಧಿಕಾರಿಗಳ ಗಮನಕ್ಕೆ ತಂದರೂ ಅಧಿಕಾರಿಗಳು ಮಾತ್ರ ಕ್ಯಾರೇ ಎಂದಿಲ್ಲ. ಹೀಗಾಗಿ ಅಂಚೆ ಇಲಾಖೆ ವಂಚಕರ ವಿರುದ್ಧ ಹಣ ಕಳೆದುಕೊಂಡು ಕಂಗಾಲಾಗಿರುವ ಜನರು ಆಕ್ರೋಶ ಹೊರ ಹಾಕಿದ್ದಾರೆ.

### ನದಿ ಪಾತ್ರದ, ಅದರ ಸುತ್ತಮುತ್ತ ಇರುವ ಗ್ರಾಮಸ್ಥರ ಗಮನಕ್ಕೆ

# ತುಂಗಭದ್ರಾ ನೀರು ಬಳಸದಿರಲು ಸೂಚನೆ

■ ವಿಜಯಸಾಕ್ಷಿ ಸುದ್ದಿ, ಗದಗ

ಗದಗ ಜಿಲ್ಲೆ ಮುಂಡರಗಿ ತಾಲೂಕಿನ ತುಂಗಭದ್ರಾ ನದಿ ಪಾತ್ರದ ಕೊರ್ಲಹಳ್ಳಿ ಮತ್ತು ಗಂಗಾಪೂರ ಮತ್ತು ಅದರ ಸುತ್ತಮುತ್ತ ಇರುವ ಗ್ರಾಮಗಳ ವ್ಯಾಪ್ತಿಯ ಸಾರ್ವಜನಿಕರಿಗೆ ತಿಳಿಸುವುದೇನೆಂದರೆ, ತುಂಗಭದ್ರಾ ನದಿ ಪಾತ್ರದ ಗ್ರಾಮಗಳ ವ್ಯಾಪ್ತಿಯ ನೀರು ಹಸಿರು ಬಣ್ಣಕ್ಕೆ ತಿರುಗಿರುವುದನ್ನು ಗಮನಿಸಿ, ಜಿಲ್ಲಾಡಳಿತ ಈಗಾಗಲೇ ತಾಲೂಕಾಡಳಿತ ಮತ್ತು ಸಂಬಂಧಿಸಿದ ಅಧಿಕಾರಿಗಳೊಂದಿಗೆ ಸ್ಥಳ ಪರಿಶೀಲನೆ ಮಾಡಿದ್ದು, ಈ ಬಗ್ಗೆ ಸಂಬಂಧಿಸಿದ ಅಧಿಕಾರಿಗಳಿಗೆ ಸದರಿ ವಿಷಯದ ಬಗ್ಗೆ ಸೂಕ್ತ ಕ್ರಮವಹಿಸಲು ಸೂಚಿಸಲಾಗಿತ್ತು.

ಸದರಿ ನೀರು ಹಸಿರು ಬಣ್ಣ-ಕ್ಕೆ ತಿರುಗಲು ಕಾರಣವಾಗಿರುವ ಅಂಶಗಳನ್ನು ಪತ್ತೆಹಚ್ಚಲು ನದಿ ನೀರಿನ ಮಾದರಿಯನ್ನು ಪರಿಸರ ಮಾಲಿನ್ಯ ನಿಯಂತ್ರಣ ಮಂಡಳಿಯವರು ಪ್ರಯೋಗಾಲಯಕ್ಕೆ ಈಗಾಗಲೇ ಕಳುಹಿಸಲಾಗಿ, ಸದರಿ ನೀರು ಸದ್ಯ ಕುಡಿಯಲು ಯೋಗ್ಯವಿಲ್ಲವೆಂದು ಪ್ರಾಥಮಿಕ ವರದಿ ನೀಡಿರುತ್ತಾರೆ. ನೀರು ಹಸಿರು ಬಣ್ಣಕ್ಕೆ ತಿರುಗಲು ಕಾರಣವಾಗಿರುವ ಬಗ್ಗೆ ವೈಜ್ಞಾನಿಕ ಅಂಶವನ್ನು ಪರಿಶೀಲಿಸಲು ಸಹ ಸೂಕ್ತ ಕ್ರಮ ಕೈಗೊಳ್ಳಲು ಪರಿಸರ ಮಾಲಿನ್ಯ ನಿಯಂತ್ರಣ ಮಂಡಳಿಯವರಿಗೆ ಸೂಚಿಸಿದೆ.

ಕೊರ್ಲಹಳ್ಳಿ ಮತ್ತು ಗಂಗಾಪೂರ ಗ್ರಾಮದ ಮಧ್ಯದಲ್ಲಿರುವ ಖಾಸಗಿ ಸಕ್ಕರೆ ಕಾರ್ಖಾನೆಗೆ ತೆರಳಿ ಅಲ್ಲಿಯ ತ್ಯಾಜ್ಯವನ್ನು ಸಹ ಪರಿಶೀಲನೆ ನಡೆಸಲಾಗುತ್ತಿದೆ ಮತ್ತು ಸದರಿ ಕಾರ್ಖಾನೆಯ ತ್ಯಾಜ್ಯ ನದಿ ನೀರಿಗೆ ಸೇರುತ್ತಿದೆಯೋ ಇಲ್ಲವೋ ಎಂಬುದರ ಬಗ್ಗೆಯೂ ಸಹ ಪರಿಶೀಲನೆ ನಡೆಸಲಾಗುತ್ತಿದೆ. ಮುನ್ನೆಚ್ಚರಿಕೆ ಕ್ರಮವಾಗಿ ಈ ಎಲ್ಲಾ ಅಂಶಗಳ ಬಗ್ಗೆ ಪರಿಶೀಲನೆ ನಡೆದಿದ್ದು, ಪರಿಶೀಲನಾ ವರದಿ ಬಂದ ಕೂಡಲೇ ಅಗತ್ಯ ಕ್ರಮ ಜರುಗಿಸಲಾಗುವುದು. ಈ ವಿಷಯದ ಬಗ್ಗೆ ಜಿಲ್ಲಾಡಳಿತ ಹಾಗೂ ತಾಲೂಕಾಡಳಿತದಿಂದ ಮುನ್ನೆಚ್ಚರಿಕೆ ಕ್ರಮ ವಹಿಸಲಾಗಿದ್ದು, ಸಾರ್ವಜನಿಕರು ಯಾವುದೇ ರೀತಿಯ ಆತಂಕ ಪಡುವ ಅಗತ್ಯವಿಲ್ಲವೆಂದು ಉಪವಿಭಾಗಾಧಿಕಾರಿಗಳ ಕಾರ್ಯಾಲಯದ ಪ್ರಕಟಣೆ ತಿಳಿಸಿದೆ.

ಸಾರ್ವಜನಿಕರಿಗೆ ಹಾಗೂ ಜಾನುವಾರುಗಳಿಗೆ ಸದರಿ ನೀರನ್ನು ಉಪಯೋಗಿಸದಂತೆ ಸಂಬಂಧಿಸಿದ ಪಂಚಾಯತ್ ಅಭಿವೃದ್ಧಿ ಅಧಿಕಾರಿಗಳಿಗೆ ಈಗಾಗಲೇ ಮುನ್ನೆಚ್ಚರಿಕೆ ಕ್ರಮಕೈಗೊಳ್ಳಲು ಸೂಚಿಸಲಾಗಿದೆ. ತುಂಗಭದ್ರಾ ನದಿ ನೀರನ್ನು ಸದರಿ ಗ್ರಾಮಗಳಿಗೆ ಪೂರೈಸದಂತೆ ಸದ್ಯ-ಕ್ಕೆ ತಡೆಹಿಡಿಯಲಾಗಿದೆ. ಇದಕ್ಕೆ ಪರ್ಯಾಯವಾಗಿ ಸದರಿ ಗ್ರಾಮಗಳ ಸಾರ್ವಜನಿಕರಿಗೆ ಹಾಗೂ ಜಾನುವಾರುಗಳಿಗೆ ಸ್ಥಳೀಯವಾಗಿ ಲಭ್ಯವಿರುವ ಬೋರ್‌ವೆಲ್‌ಗಳ ಮೂಲಕ ಶುದ್ಧ ಕುಡಿಯುವ ನೀರನ್ನು ಪೂರೈಸಲಾಗುತ್ತಿದೆ. ಸದರಿ ಗ್ರಾಮಗಳ ಸಾರ್ವಜನಿಕರ ಗಮನಕ್ಕೆ ಡಂಗುರ ಸಾರುವ ಮೂಲಕ ಮಾಹಿತಿ ನೀಡಲಾಗಿದೆ.

## ಸಂಪಾದಕೀಯ

# ಆರೋಗ್ಯ ಕ್ಷೇತ್ರದ ದೊಡ್ಡ ಕ್ರಾಂತಿಕಾರಕ ಘೋಷಣೆ

ಗ್ಯಾರಂಟಿ ಕಾರ್ಯಕ್ರಮಗಳ ಮೂಲಕ ಬಡವರ ಮನ ಗೆದ್ದ ಸಿದ್ದರಾಮಯ್ಯ, ಮತ್ತೊಂದು ಬಹುದೊಡ್ಡ ಘೋಷಣೆಯನ್ನು ಮಾಡಿದ್ದಾರೆ. ರಾಜ್ಯದ ಪ್ರತಿ ಜಿಲ್ಲೆಯಲ್ಲಿಯೂ ಮೆಡಿಕಲ್ ಕಾಲೇಜ್ ಹಾಗೂ ಸೂಪರ್ ಸ್ಪೆಷಾಲಿಟಿ ಆಸ್ಪತ್ರೆ ಆರಂಭಿಸುವುದಾಗಿ ನೀಡಿರುವ ಹೇಳಿಕೆ ಅತ್ಯಂತ ಸ್ವಾಗತಾರ್ಹವಾಗಿದೆ.

ರಾಜ್ಯದ 32 ಜಿಲ್ಲೆಗಳ ಪೈಕಿ ಬಹುತೇಕ ಎಲ್ಲ ಜಿಲ್ಲೆಗಳಲ್ಲೂ ವೈದ್ಯಕೀಯ ಮಹಾವಿದ್ಯಾಲಯಗಳಿವೆ. ಆದರೆ ಉತ್ತರ ಕನ್ನಡ ಸೇರಿದಂತೆ ಹೊಸದಾಗಿ ಘೋಷಣೆಯಾದ ಜಿಲ್ಲೆಗಳಲ್ಲಿ ಈಗಲೂ ಮೆಡಿಕಲ್ ಕಾಲೇಜುಗಳಿಲ್ಲ. ಮೆಡಿಕಲ್ ಕಾಲೇಜು ಇದ್ದರೂ ಸೂಪರ್ ಸ್ಪೆಶಾಲಿಟಿ ಆಸ್ಪತ್ರೆ ಇಲ್ಲ.

ವೈದ್ಯಕೀಯ ಮಹಾವಿದ್ಯಾಲಯಗಳ ಅಧೀನದಲ್ಲಿ ನಡೆಯುವ ಆಸ್ಪತ್ರೆಗಳನ್ನೇ ಜಿಲ್ಲಾ ಆಸ್ಪತ್ರೆಗಳೆಂದು ಪರಿಗಣಿಸಲಾಗಿದೆ. ಆದರೆ ರಾಜ್ಯದ ಬೆರಳಣಿಕೆಯ ಆಸ್ಪತ್ರೆಗಳಲ್ಲಿ ಮಾತ್ರ ಜನರಿಗೆ ಉತ್ತಮ ಆರೋಗ್ಯ ಸೇವೆ ದೊರೆಯುತ್ತಿದೆ. ಆದರೆ ಸೂಪರ್ ಸ್ಪೆಷಾಲಿಟಿಯ ಸೇವೆ ಅಗತ್ಯವಾದರೆ, ಸಮೀಪದ ಮಹಾನಗರಗಳಿಗೆ ಹೋಗುವುದು ಅನಿವಾರ್ಯವಾಗಿದೆ.

ತೀರಾ ತುರ್ತು ಸಂದರ್ಭದಲ್ಲಿ ಮಾತ್ರ ರೋಗಿಗಳನ್ನ ಸೂಪರ್ ಸ್ಪೆಷಾಲಿಟಿ ಆಸ್ಪತ್ರೆಗೆ ಕರೆದೊಯ್ಯಲು ಸೂಚಿಸಲಾಗುತ್ತದೆ. ಹೀಗೆ ಜಿಲ್ಲಾ ಆಸ್ಪತ್ರೆಯಿಂದ ಸೂಪರ್ ಸ್ಪೆಷಾಲಿಟಿ ಆಸ್ಪತ್ರೆ ತಲುಪುವಷ್ಟರಲ್ಲಿ ಅನೇಕ ಬಡ ರೋಗಿಗಳು ಜೀವ ಕಳೆದುಕೊಂಡ ಉದಾಹರಣೆಗಳಿವೆ.

ಅದರಲ್ಲೂ ಉತ್ತರ ಕರ್ನಾಟಕ ಭಾಗದಲ್ಲಿ ಹುಬ್ಬಳ್ಳಿ, ಬೆಳಗಾವಿ, ಕಲಬುರ್ಗಿ ಹೊರತುಪಡಿಸಿದರೆ ಸೂಪರ್ ಸ್ಪೆಷಾಲಿಟಿ ಸೇವೆ ನೀಡುವಂತಹ ಯಾವುದೇ ಸರ್ಕಾರಿ ವೈದ್ಯಕೀಯ ಸಂಸ್ಥೆಗಳಿಲ್ಲ. ಹೀಗಾಗಿ ಪ್ರತಿ ಜಿಲ್ಲೆಗೊಂದು ವೈದ್ಯಕೀಯ ಕಾಲೇಜ್, ಸೂಪರ್ ಸ್ಪೆಷಾಲಿಟಿ ಆಸ್ಪತ್ರೆ ಕನಸು ಸಾಕಾರಗೊಂಡರೆ, ಬಡವರ ಮಕ್ಕಳು ವೈದ್ಯಕೀಯ ಶಿಕ್ಷಣವನ್ನ ಪಡೆಯಲು ಸಾಧ್ಯ. ಬಡವರು ನಿಶ್ಚಿಂತೆಯಿಂದ ಸರ್ಕಾರಿ ಆಸ್ಪತ್ರೆಗಳಲ್ಲಿ ಚಿಕಿತ್ಸೆ ಪಡೆಯಲು ಸಾಧ್ಯ.

ಮುಖ್ಯಮಂತ್ರಿ ಸಿದ್ದರಾಮಯ್ಯ ಆದಷ್ಟು ಬೇಗ ಜಿಲ್ಲೆಗೊಂದು ವೈದ್ಯಕೀಯ ಮಹಾವಿದ್ಯಾಲಯ ಸ್ಥಾಪನೆಗೆ ಕ್ರಮ ಕೈಗೊಳ್ಳಲಿ. ಮುಂದಿನ ರಾಜ್ಯ ಬಜೆಟ್ ನಲ್ಲಿ ಅದಕ್ಕಾಗಿ ಅನುದಾನವನ್ನು ಘೋಷಣೆ ಮಾಡಲಿ. ಬಡವರ ಕಲ್ಯಾಣ ಕಾರ್ಯಕ್ರಮ ಹೀಗೆ ಮುಂದುವರೆಯಲಿ.

# ಯೋಜನೆಗಳ ಜಾರಿಗೆ ನಿಯಮ ಸಡಿಲಿಸಿ – ಕೇಂದ್ರಕ್ಕೆ ರಾಜ್ಯ ಮನವಿ

■ ವಿಜಯಸಾಕ್ಷಿ ಸುದ್ದಿ, ಬೆಂಗಳೂರು

ರಾಜ್ಯದಲ್ಲಿ ಕೇಂದ್ರ ಸರ್ಕಾರದ ಯೋಜನೆಗಳ ಜಾರಿಗಾಗಿ ಕೆಲವೊಂದು ಸಡಿಲಿಕೆ ಹಾಗೂ ಮಾರ್ಗಸೂಚಿಗಳಲ್ಲಿ ಮಾರ್ಪಡು ಮಾಡುವಂತೆ ಗ್ರಾಮೀಣಾಭಿವೃದ್ಧಿ ಹಾಗೂ ಪಂಚಾಯತ್ ರಾಜ್ ಸಚಿವ ಪ್ರಿಯಾಂಕ್ ಖರ್ಗೆ ಶನಿವಾರ ಕೇಂದ್ರಕ್ಕೆ ಮನವಿ.

ಈ ಬಗ್ಗೆ ಕೇಂದ್ರ ಗ್ರಾಮೀಣಾಭಿವೃದ್ಧಿ ಹಾಗೂ ಪಂಚಾಯತ್ ರಾಜ್ ಮತ್ತು ಕೃಷಿ ಸಚಿವ ಶಿವರಾಜ್ ಸಿಂಗ್ ಚೌಹಾಣ್ ಅವರನ್ನು ಭೇಟಿಯಾಗಿ ಮನವಿ ಸಲ್ಲಿಸಿದ್ದಾರೆ. ಯೋಜನೆಗಳ ಜಾರಿಗೆ

ಇದೇ ವೇಳೆ ಗ್ರಾಮೀಣಾಭಿವೃದ್ಧಿಗೆ ಸಂಬಂಧಿಸಿದಂತೆ ವಿಷಯಗಳ ಕುರಿತು ಜನವರಿ 3 ರಂದು ಚರ್ಚಿಸಲು ಅನುಕೂಲ ಮಾಡಿಕೊಟ್ಟಿರುವುದಕ್ಕೆ ಸಚಿವ ಖರ್ಗೆ ಅವರು ಚೌಹಾಣ್ ಅವರಿಗೆ ಧನ್ಯವಾದ ತಿಳಿಸಿದ್ದು, ರಾಜ್ಯದಲ್ಲಿ ಕೇಂದ್ರ ಯೋಜನೆಗಳ ಜಾರಿಗೆ ಸಂಬಂಧಿಸಿದಂತೆ ನಿಯಮಾವಳಿಗಳಲ್ಲಿ ಕಲವೊಂದು ಮಾರ್ಪಡು ಮಾಡುವಂತೆ ಕೋರಿದ್ದಾರೆ. ಯೋಜನೆಗಳ ಜಾರಿಗೆ

ಕವನ

## ಗುರುವಂದ್ರ ಹೀಂಗಿರಬೇಕು!



ಇರಬೇಕು.. ಗುರು ಅಂದ್ರ ಹಿಂಗ ಇರಬೇಕು
ಗುರಿ ಮುಟ್ಟೊರಗೆ ಸರಿ ದಾರಿ ತೋರಸುವಂಗ
ನುಡಿದಂತೆ ನಡೆದ ನಡದಂತೆ ನುಡಿದವರು
ಅವರನ ನೋಡಿ ನಾವೆಲ್ಲ ಕಲಿಯೋ ಹಾಂಗ
ನಮ್ಮ ವಿ.ಜಿ. ಮಠಪತಿ ಗುರುಗಳಿರುವ ಹಾಂಗ.!

ಇರಬೇಕು.. ಗುರು ಅಂದ್ರ ಹಿಂಗ ಇರಬೇಕು
ನೇರ ದಿಟ್ಟ ನಡೆ–ನುಡಿ ಅಳವಡಿಸಿಕೊಂಡಿರಬೇಕು
ತಿದ್ದುವ ತೀಡುವ ಕಲಿಸುವ ಆಸಕ್ತಿ ಇರಬೇಕು
ನಮಗೆ ಕಲಿವ ಆಸಕ್ತಿ ಇಮ್ಮಡಿ ಆಗುವ ಹಾಂಗ
ಹೆಂಗ ಅಂದ್ರ ಮಠಪತಿ ಗುರುಗಳಿರುವ ಹಾಂಗ.!

ಇರಬೇಕು.. ಗುರು ಅಂದ್ರ ಹಿಂಗ ಇರಬೇಕು
ಪಾದರಸದ ಕ್ರಿಯಾಶೀಲತೆ ಆವರಿಸಿಕೊಂಡಿರಬೇಕು
ನಯ ವಿನಯ ವಿಧೇಯತೆ ಮೂಡಿಸುವಂತಿರಬೇಕು
ನಮ್ಮ ಗುಣ ವ್ಯಕ್ತಿತ್ವಗಳನೇ ಬದಲಿಸುವ ಹಾಂಗ
ಹೆಂಗ ಅಂದ್ರ ಆದರ್ಶ ಮಠಪತಿ ಗುರುಗಳ ಹಾಂಗ.!

ಇರಬೇಕು.. ಗುರು ಅಂದ್ರ ಹಿಂಗ ಇರಬೇಕು
ವಜ್ರ ಹೊಳಪು ಸೂರ್ಯ ತೇಜಸ್ಸು ಮಿಂಚಬೇಕು
ನಕ್ಷತ್ರದ ಮಿನುಗು ಚಂದ್ರನ ಬೆಳದಿಂಗಳಿರಬೇಕು
ವಿದ್ಯಾರ್ಥಿಗಳ ಬದುಕಿಗೆ ಬೆಳಕಾಗುವ ಹಾಂಗ
ಹೆಂಗ ಅಂದ್ರ ಮಾದರಿ ಮಠಪತಿ ಗುರುಗಳ ಹಾಂಗ.!

ಇರಬೇಕು.. ಗುರು ಅಂದ್ರ ಹಿಂಗ ಇರಬೇಕು
ಬಡತನದ ಬೆಂಕಿಯಲೂ ಅರಳಿದ ಹೂವಂತಿರಬೇಕು
ಹತ್ತಿ ಬತ್ತಿಯಾಗಿ ಗಾಣದೆಣ್ಣೆಯಾಗಿ ಮಾಗಿರಬೇಕು
ಬಾಳನ್ನೇ ದೀಪವಾಗಿಸಿ ಊರನ್ನೇ ಬೆಳಗುವ ಹಾಂಗ
ಹೆಂಗ ಅಂದ್ರ ಮಠಪತಿ ಗುರುಗಳ ಜೀವನದಾಂಗ.!

ಇರಬೇಕು.. ಗುರು ಅಂದ್ರ ಹಿಂಗ ಇರಬೇಕು
ಅಪರೂಪದ ಗುರುವಾಗಿ ಶಿಷ್ಯಕೋಟಿ ಬೆಳೆಸಿರಬೇಕು
ಸುಜ್ಞಾನ ದೀವಿಗೆಯಿಂದ ಜಗವನ್ನೇ ಬೆಳಗಿರಬೇಕು
ಪ್ರತಿ ಗುರುವೂ ಹೀಂಗ ಇರಬೇಕು ಅನಿಸುವ ಹಾಂಗ
ನಮ್ಮ ವಿ ಜಿ ಮಠಪತಿ ಗುರುಗಳಿರುವ ಹಾಂಗ.!

– ಚಂದ್ರಕಲಾ ಎಂ.ಇಟಗಿಮಠ.


### ಜನವರಿ 19, ಮಹಾಯೋಗಿ ವೇಮನರ ಜಯಂತಿಯ ಪ್ರಯುಕ್ತ ವಿಶೇಷ ಲೇಖನ

# ವಾಸ್ತವಿಕತೆಯ ಬೆಳಕನ್ನು ಪರಿಚಯಿಸಿದ ಮಹಾಯೋಗಿ

ಬದುಕಿನ ಸಾರ–ಸತ್ವವನ್ನು ಅರಿತುಕೊಂಡು ಮುಂಬರುವ ಪೀಳಿಗೆಗೆ ಅನುಭವದ ಅಮೃತವನ್ನು ನೀಡುವ ಮೂಲಕ ಬದುಕಿನ ವಾಸ್ತವಿಕತೆ ಮೇಲೆ ಬೆಳಕು ಚೆಲ್ಲಿದವರು ಶರಣರು, ಸಂತರು, ಸಾಧುಗಳು, ದಾರ್ಶನಿಕರು, ತತ್ವಜ್ಞಾನಿಗಳು ಹಾಗೂ ಸಮಾಜ ಸುಧಾರಕರಾಗಿದ್ದಾರೆ. ಒಂದು ದಿನ ಮುಗಿದುಹೋಗುವ ಈ ಜೀವನದ ಪಯಣದಲ್ಲಿ ಕಷ್ಟ–ಸುಖ, ನೋವು–ನಲಿವು, ಸಂಘರ್ಷ ಹೋರಾಟ, ಅದೆಷ್ಟೋ ಏರಿಳಿತಗಳನ್ನು ಅನುಭವಿಸಿದ ಮಹನೀಯರು ತಾವು ಕಂಡುಂಡ ಅನುಭವಗಳನ್ನು ಆಧರಿಸಿ ಸಮಾಜಕ್ಕೊಂದು ಮೌಲ್ಯಯುತ ಸಂದೇಶವನ್ನು ಸಾರಿ ಹೋಗಿದ್ದಾರೆ. ಅಂತಹ ಮಹನೀಯರ ಸಾಲಿನಲ್ಲಿ ನಿಲ್ಲುವ ವೇಮನರು ತುಂಬ ವಿಶೇಷವೆನಿಸುತ್ತಾರೆ. ಕಾರಣ, ವಿಷಯಾಸಕ್ತರಾಗಿ ಭೋಗಜೀವನದ ದಾಸರಾಗಿ ಕೊನೆಗೊಂದು ದಿನ ವೈರಾಗ್ಯವನ್ನು ತಾಳಿ, ಇಡೀ ಮಾನವ ಸಂಕುಲಕ್ಕೆ ಬದುಕಿನ ನಶ್ವರತೆಯನ್ನು ತಿಳಿಸುತ್ತಾ ವಾಸ್ತವಿಕತೆಯ ಬೆಳಕನ್ನು ಪರಿಚಯಿಸಿದ್ದಾರೆ.

15ನೇ ಶತಮಾನದಲ್ಲಿ ತೆಲುಗು ನಾಡಿನ(ಆಂಧ್ರ ಪ್ರದೇಶ್) ಶ್ರೇಷ್ಠ ಸಂತರಾಗಿ, ಕವಿಗಳಾಗಿ, ಪರಮಜ್ಞಾನಿಗಳಾಗಿ, ಮಹಾಕವಿ ವೇಮನರು ಮಾನವನನ್ನು ಮಾನವನ ನಾಗಿಸಲು ಅವನಲ್ಲಿಯ ಜನ್ಮಜನ್ಮಾಂತರವಾಗಿ ಅಂಟಿಕೊಂಡಿರುವ ಕೆಲವೊಂದಿಷ್ಟು ಅತಿರೇಕದ, ಹಿತಮಿತವಿಲ್ಲದ ವರ್ತನೆಗಳು ವ್ಯಕ್ತಿಗೆ ಹಾಗೂ ಸಮಾಜಕ್ಕೆ ಮಾರಕವಾಗಬಲ್ಲವು ಎನ್ನುವ ಅಂಶವನ್ನು ಭಾರತೀಯ ಋಷಿಪರಂಪರೆಯ ವ್ಯಕ್ತ ರೂಪವಾದ ವೇಮನರು ನಿಜ ಜೀವನದ ದರ್ಶನವನ್ನು ತೋರಿದ್ದಾರೆ.

ರೆಡ್ಡಿ ಅರಸು ಮನೆತನದ ಕುಡಿಯಾಗಿ ಕುಮಾರಗಿರಿ ರೆಡ್ಡಿ ಮತ್ತು ಕೂತೂರು ಮಲ್ಲಮ್ಮ ದಂಪತಿಗಳ 5ನೇ ಮಗನಾಗಿ ಜನಿಸಿದ ವೇಮನರು ಎರಡು ವರ್ಷದ ಹಸುಳೆ ಇರುವಾಗ ರೆಡ್ಡಿ ಅರಸು ಮನೆತನಗಳಲ್ಲಿ ದಾಯಾದಿಗಳ ಕಲಹ ತೀವ್ರವಾಗಿತ್ತು. ಇಂತಹ ಹತ್ತು ಹಲವು ವ್ಯತಿರಿಕ್ತ ಸನ್ನಿವೇಶದಲ್ಲಿ ಬೆಳೆದ ವೇಮನರು ಹೆತ್ತವರಿಂದ ಹಾಗೂ ಒಡಹುಟ್ಟಿದವರಿಂದ ಸಂಬಂಧಿಕರಿಂದ ಅಲಕ್ಷ್ಯಕ್ಕೆ ಒಳಗಾದರು. ಇಂತಹ ಸಂದರ್ಭದಲ್ಲಿ ಅಣ್ಣನ ಹೆಂಡತಿಯಾದ ಅತ್ತಿಗೆ ಹೇಮರೆಡ್ಡಿ ಮಲ್ಲಮ್ಮನವರ ಆಶ್ರಯದಲ್ಲಿ ಮಗನಂತೆ ಬೆಳೆಯಲಾರಂಭಿಸಿದರು.




ಹೆತ್ತ ತಾಯಿಯಂತೆ ಮಮತೆ ಪ್ರೀತಿ ವಾತ್ಸಲ್ಯ ತೆ–ೂರಿದ ಹೇಮರೆಡ್ಡಿ ಮಲ್ಲಮ್ಮ ಲೌಕಿಕ ತುಮುಲಗಳಿಗೆ ಅಂಟಿಕೊಂಡಿದ್ದ ವೇಮನನಿಗೆ ತಾಯಿಯಾಗಿ ಆಧ್ಯಾತ್ಮ ಗುರುವಾಗಿ ಮಾರ್ಗ ತೋರಿದ ಮಹಾತಾಯಿ ಮಲ್ಲಮ್ಮ. ಆಂಧ್ರಪ್ರದೇಶದ ಶ್ರೀಶೈಲ ಪ್ರದೇಶವನ್ನಾಳಿದ ಕೊಂಡವೀಡು ರಾಜವಂಶದ ಸೊಸೆಯಾದ ಮಲ್ಲಮ್ಮ ಶ್ರೀಶೈಲ ಮಲ್ಲಿಕಾರ್ಜುನ ಸ್ವಾಮಿಯ ಮಾನಸ ಪುತ್ರಿ. ಶಿವಶರಣೆ ಅಕ್ಕಮಹಾದೇವಿಯು ಚನ್ನಮಲ್ಲಿಕಾರ್ಜುನನನ್ನು ತನ್ನ ಪತಿಯೆಂದು ಭಾವಿಸಿದರೆ ಹೇಮರೆಡ್ಡಿ ಮಲ್ಲಮ್ಮ ಮಲ್ಲಿಕಾರ್ಜುನ ಸ್ವಾಮಿಯನ್ನು ತನ್ನ ತಂದೆಯೆಂದು ನಂಬಿ ಆಧ್ಯಾತ್ಮ ಸಾಧನೆಯ ಹಾದಿಯನ್ನು ತೋರಿದರು. ಮಲ್ಲಮ್ಮ ಸ್ತ್ರೀ ಕುಲಕ್ಕೆ ಆದರ್ಶ ರತ್ನವಾಗಿದ್ದಾರೆ. ಇಂತಹ ಮಹಾಸಾಧ್ವಿಯನ್ನು ಅತ್ತಿಗೆಯನ್ನಾಗಿ ಪಡೆದ ವೇಮನರ ಬದುಕಿನಲ್ಲಿ ಮಹಾ ಯೋಗಿಯಾಗುವ ಸಾಕ್ಷಾತ್ಕಾರದ ಹಾದಿಗೆ ಮೂಲ ಪ್ರೇರಣೆಯೇ ಹೇಮರೆಡ್ಡಿ ಮಲ್ಲಮ್ಮನವರಾಗಿದ್ದಾರೆ.

ಇಡೀ ರೆಡ್ಡಿ ಕುಲದ ಆರಾಧ್ಯ ದೈವವಾಗಿ ಹೇಮರೆಡ್ಡಿ ಮಲ್ಲಮ್ಮ ಹಾಗೂ ಮಹಾಯೋಗಿ ವೇಮನರು ತಮ್ಮ ಬದುಕಿನ ದರ್ಶನದಿಂದ ಇಡೀ ಮಾನವ ಕುಲ ಕೋಟಿಗೆ ಮನುಷ್ಯ ಜೀವನದ ಆದರ್ಶಗಳನ್ನು ತತ್ವಗಳನ್ನು ಸಂದೇಶಗಳನ್ನು ವಾಸ್ತವ ಸಂಗತಿಗಳನ್ನು ತಿಳಿಯಪಡಿಸಿದ್ದಾರೆ. ಹೇಮರೆಡ್ಡಿ ಮಲ್ಲಮ್ಮನ ಚರಿತ್ರೆ ರೋಮಾಂಚನಕಾರಿಯಾದ ಬದುಕಿನ ತಿರುವನ್ನು ಪ್ರತಿಯೊಬ್ಬರಲ್ಲಿ ಮೂಡಿಸುತ್ತದೆ. ಜೀವನದಲ್ಲಿ ಬರುವ ಕಷ್ಟ–ಸುಖ ನೋವು–ನಲಿವು ಎಲ್ಲವನ್ನೂ ಸಮಚಿತ್ತದಿಂದ ಸ್ವೀಕರಿಸಿ ಭಕ್ತಿ ಭಾವಗಳ ಆಪ್ತತೆಯೊಂದಿಗೆ ಮಹಾಸಾಧ್ವಿ ಎನಿಸಿಕೊಂಡ ಹೇಮರೆಡ್ಡಿ ಮಲ್ಲಮ್ಮ ಮಹಾಯೋಗಿ ವೇಮನರಿಗೆ ವಾತ್ಸಲ್ಯ ಕರುಣೆ ಮಮತೆಯಲ್ಲಿ ಬೆಳೆಸಿದರು ಕೂಡ ಆಸೆ ಆಮಿಷಗಳ ವಿಷಯಂಗಳಿಗೆ ಮನಸೋತು ದುಶ್ಚಟಗಳ ದಾಸನಾಗಿ ವೇಶ್ಯೆಯೊಬ್ಬಳ ಸಹವಾಸವನ್ನು ಮಾಡಿ ಮನೆಯ ಸಂಪತ್ತನ್ನೆಲ್ಲ ಹಾಳು ಮಾಡುವುದರ ಜೊತೆಗೆ ಮನೆಯ ಘನತೆ–ಗೌರವಕ್ಕೆ ಧ–ಕ್ಕೆ ಬರುವಂತೆ ನಡೆದುಕೊಳ್ಳುತ್ತಿದ್ದ ರೀತಿ ಇದೆಲ್ಲವನ್ನೂ ನೋಡಿದ ಅತ್ತಿಗೆ ಹೇಮರೆಡ್ಡಿ ಮಲ್ಲಮ್ಮ ಹೇಗಾದರೂ ಮಾಡಿ ಮೈದುನನ ಮನ ಪರಿವರ್ತಿಸಿ ಒಳ್ಳೆಯ ಮಾರ್ಗವನ್ನು ತೋರಬೇಕು ಎನ್ನುವ ವಿಚಾರ ಮಾಡುತ್ತಾರೆ.

ನಾವು ಚರಿತ್ರೆಯಲ್ಲಿ ಕೇಳಿದ ಸಂಗತಿಯಂತೆ ಸ್ತ್ರೀಯ ದಾಸನಾದ ವೇಮನ ಅವಳ ಮನದಾಸೆ ಈಡೇರಿಸಲು ಅತ್ತಿಗೆಯಾಗಿದ್ದ ಹೇಮರೆಡ್ಡಿ ಮಲ್ಲಮ್ಮನ ಮೂಗುತಿಯನ್ನು ಕೇಳುತ್ತಾನೆ. ಆಗ ಒಂದು ಕರಾರನ್ನು ವಿಧಿಸುವ ಮೂಲಕ ಹೇಮರೆಡ್ಡಿ ಮಲ್ಲಮ್ಮ ಮೂಗುತಿಯನ್ನು ಕೊಡಲು ಒಪ್ಪುತ್ತಾಳೆ. ನಂತರ ಮೂಗುತಿಯನ್ನು ತೆ–ಗೆದುಕೊಂಡು ಹೋದ ವೇಮನರು ಮೂಗುತಿ ಕೊಡುವಾಗ ಕರಾರಿನಂತೆ ನಗ್ನ ಸ್ತ್ರೀಯ ದೇಹವನ್ನು ತದೇಕಚಿತ್ತದಿಂದ ನೋಡಿದಾಗ ಜೀವನದಲ್ಲಿ ಏನೋ ಒಂದು ತರಹ ಅಸಹ್ಯದ ಭಾವನೆ ಆವರಿಸಿ ಜಿಗುಪ್ಸೆಗೊಂಡು, ನಶ್ವರ ಶರೀರದ ಮೇಲಿನ ವ್ಯಾಮೋಹ ಕಳಚಿ ಆಸೆ–ಆಮಿಷಗಳನ್ನು ಕಿತ್ತೊಗೆದು, ಮನಪರಿವರ್ತನೆಗೊಂಡು ಮಹಾಯೋಗಿಯಾದ ದೃಷ್ಟಾಂತ ವೇಮನರ ಬದುಕಿನಲ್ಲಿ ಮಹಾತಿರುವನ್ನು ನೀಡಿದ ಘಟನೆಯದು.

ಅವರ ಸಾಹಿತ್ಯ ಸರಿಯಾದ ರೀತಿಯಲ್ಲಿ ದಾಖಲಾಗಲಿಲ್ಲ. ನಂತರ ಕೆಲವು ತಾಳೆಗರಿಯ ಮೇಲೆ ಬರೆಯಲ್ಪಟ್ಟವು. ಬ್ರಿಟಿಷ್ ಅಧಿಕಾರಿ ಅವುಗಳನ್ನು ಗ್ರಂಥರೂಪದಲ್ಲಿ ಪ್ರಕಟಿಸುವ ಕಾರ್ಯ ಪ್ರಾರಂಭಿಸಿದ ನಂತರ, ವೇಮನರ ಸಾಹಿತ್ಯವು 20ನೇ ಶತಮಾನದಲ್ಲಿ ಕನ್ನಡ ಭಾಷೆಗೆ ಕೆಲವು ಪದ್ಯಗಳು ತರ್ಜುಮೆಯಾದವು. ನಂತರದಲ್ಲಿ ಹಲವು ಮಹನೀಯರ ಸಂಗ್ರಹಿಸಿ ಅನಂತರ ಡಾ.ಫ.ಗು ಹಳಕಟ್ಟಿಯವರು ಕೆಲವು ಮಹತ್ವದ ವೇಮನರ ಪದ್ಯಗಳನ್ನು ಆಯ್ದುಕೊಂಡು 'ವೇಮಣ್ಣ ಯೋಗಿಯ ವಚನಗಳು' ಎಂಬ ಗ್ರಂಥವನ್ನು ಪ್ರಕಟಿಸಿದರು.

ಮಹಾಯೋಗಿ ವೇಮನರ ತತ್ವ–ಸಿದ್ಧಾಂತಗಳು ಇಡೀ ಮಾನವ ಕಲ್ಯಾಣಕ್ಕೆ ಪೂರಕವಾದವುಗಳು, ಸರ್ವಜನ ಸಮುದಾಯಕ್ಕೆ ತಲುಪುವಂತಾಗಲು ಕರ್ನಾಟಕ ವಿಶ್ವವಿದ್ಯಾಲಯದಲ್ಲಿ 'ಮಹಾಯೋಗಿ ವೇಮನ ಪೀಠ'ವನ್ನು ಸ್ಥಾಪಿಸಲಾಯಿತು. ಹೀಗೆ ವೇಮನರ ವಿಚಾರಗಳು ಲೌಕಿಕ ಜೀವನದ ನಶ್ವರತೆಯನ್ನು ತಿಳಿಸುತ್ತಾ ಅಲೌಕಿಕ ಮಾರ್ಗದ ಸಾರ್ಥಕ ಹಾದಿಯನ್ನು ತೋರುತ್ತ ಶರಣರ ತತ್ವ ಚಿಂತನೆ ಪರಂಪರೆಯನ್ನು ಮಹಾಯೋಗಿ ವೇಮನರ ಕಾವ್ಯ ಸೃಷ್ಟಿಯಲ್ಲಿ ನಾವೆಲ್ಲ ಕಾಣಬಹುದು. ಆಸೆ–ಆಮಿಷಗಳಿಗೆ ಒಳಪಟ್ಟು ಭೋಗಿಯಾದ ವೇಮನರು ಮಹಾ ಯೋಗಿಯಾಗಿ ತ್ಯಾಗ ಜೀವನದ ಸಾರ್ಥಕತೆ ಯೊಂದಿಗೆ ಮನುಕುಲದ ಉದ್ಧಾರಕ್ಕೆ ಮಾನವೀಯ ವಾಸ್ತವಿಕ ಸಂದೇಶಗಳನ್ನು ಸಾರಿದ ಮಹನೀಯರಾಗಿದ್ದಾರೆ.



– ಪ್ರೊ. ಸುಧಾ ಹುಚ್ಚಣ್ಣವರ.
ಉಪನ್ಯಾಸಕರು, ಲೇಖಕರು.

### ಇಂದು ಮಹಾಯೋಗಿ ವೇಮನರ ಜಯಂತಿ ನಿಮಿತ್ತ ವಿಶೇಷ ಲೇಖನ

# ವಾಸ್ತವ ಬದುಕಿನ ಪ್ರತಿಬಿಂಬ ವೇಮನ

ಜನಮಾನಸದಲ್ಲಿ ಬೆರೆತ, ಜನಸಾಮಾನ್ಯರ ಕವಿಯಾದ ಯೋಗಿ ವೇಮನರು ಜನರ ಅಂಧಕಾರ, ಜಾತೀಯತೆ, ಮೇಲು – ಕೀಳುಗಳನ್ನು ತಮ್ಮ ಕಾವ್ಯದ ಮೂಲಕ ವಿರೋಧಿಸಿ ಸಮಾಜಕ್ಕೆ ಅರಿವಿನ ಅಂಕುಶದಿಂದ ತಿವಿದವರು. ಬದುಕಿನ ಜಂಜಾಟದಲ್ಲಿ ಬೆಂದು ಪುರುಷಮಣಿಯಾದ ಅವರೊಬ್ಬ ಅಪರೂಪದ ಸಮಾಜ ಸುಧಾರಕರು. ಪ್ರತೀ ವರ್ಷ ಜನವರಿ 19ರಂದು ಅವರ ಜಯಂತಿಯನ್ನು ನಾಡಿನಾದ್ಯಂತ ಆಚರಿಸಲಾಗುತ್ತದೆ. ಒಂದಲ್ಲ ಒಂದು ದಿನ ಮುಗಿದು ಹೋಗುವ ಕ್ಷಣ ಕಾಲದ ಈ ಬದುಕಿನ ಭವಣೆಯಲ್ಲಿ ಕ್ಷಣಿಕ ಸುಖಕ್ಕಾಗಿ ಭೋಗ ಜೀವನದ ಕನಸು ಕಂಡು ವಿಷಯಗಳಿಗೆ ಗುಲಾಮರಾಗಿ ಅಂತಿಮವಾಗಿ ಜೀವನದಲ್ಲಿ ವಿರಕ್ತಿಯನ್ನು ಪಡೆದು, ಇಡೀ ಮನುಷ್ಯ ಜಾತಿಗೆ ಜೀವನದ ನಿಜ ಅರ್ಥವನ್ನು ತಿಳಿಸುತ್ತಾ ವಾಸ್ತವ ಬದುಕಿನ ಪ್ರತಿಬಿಂಬ ಎನಿಸಿದ್ದಾರೆ.

ನಮ್ಮ ಭಾರತ ದೇಶವು ಅನೇಕ ಸಾಧು–ಸಂತರ, ಮಹಾಪುರುಷರ, ತತ್ವಜ್ಞಾನಿಗಳ ಬೀಡು. ಇಲ್ಲಿ ಅನೇಕ ಶರಣರು ತಪೋಪುಂಗವರು ಜ್ಞಾನಜ್ಯೋತಿಯಂತೆ ಹರಿದಾಡಿ ಆಯಾ ಕುಲದ ಜನರ ಅಂಧಶ್ರದ್ಧೆ, ಮೂಢನಂಬಿಕೆ, ಅಂಧಕಾರಗಳನ್ನು ತೊಡೆದು ಮನುಕುಲದ ಏಳಿಗೆಗೆ ಶ್ರಮಿಸಿದ ಪ್ರಾತಃಸ್ಮರಣೀಯರು. ತಾವು ಕಂಡುಕೊಂಡ



ಅಪಾರ ಜ್ಞಾನವನ್ನು ಜನಸಾಮಾನ್ಯರಿಗೆ ಧಾರೆ ಎರೆಯುವ ಮೂಲಕ ಬದುಕಿನ ವಾಸ್ತವಿಕತೆಯ ಅರಿವು ಮೂಡಿಸಿದವರು. ಅವರ ನಿಸ್ವಾರ್ಥ ಜೀವನ, ಸಮಾಜಮುಖಿ ಚಿಂತನೆಗಳಿಂದಾಗಿ ಅವರು ಎಂದೆಂದಿಗೂ ಚಿರಸ್ಮರಣೀಯರು.

ಪ್ರತಿಯೊಬ್ಬ ಯಶಸ್ವಿ ಪುರುಷನ ಹಿಂದೆ ಒಬ್ಬ ಮಹಿಳೆ ಇರುತ್ತಾಳೆ ಎಂಬ ಮಾತಿನಂತೆ ದುಶ್ಚಟಗಳ ದಾಸನಾದ, ವ್ಯಸನಗಳಲ್ಲೇ ವಾಸನಾದ ವೇಮನರ ಬದುಕನ್ನು ತಿದ್ದಿ ತೀಡಿ, ವಾಸ್ತವಿಕತೆಯ ಅರಿವನ್ನೆರೆದು ಅವರ ಬದು–ಕಿಗೊಂದು ಅರ್ಥ, ಸಾರ್ಥಕತೆ ನೀಡಿದವರು ಮಹಾಸಾಧ್ವಿ ಶಿರೋಮಣಿ, ದೈವಾಂಶ ಸಂಭೂತೆ ಹೇಮರೆಡ್ಡಿ ಮಲ್ಲಮ್ಮ. ಲೌಕಿಕ ಪ್ರಪಂಚದಲ್ಲಿ ಮುಳುಗಿ ಮನೆತನದ ಗೌರವವನ್ನು ಹಾಳು ಮಾಡಿದ್ದ ಮೈದುನನ ದುರ್ವ್ಯಸನಗಳನ್ನು ಕಂಡ ಇವಳು ಹೇಗಾದರೂ ಮಾಡಿ ಮೈದುನನ ಜೀವನದ ದಿಕ್ಕನ್ನು ಬದಲಿಸಬೇಕೆಂಬ ನಿರ್ಧಾರದೊಂದಿಗೆ ವೇಮನರ ಜೀವನ ಪಥವನ್ನೇ ಬದಲಾಯಿಸಿದರು.

ಕನ್ನಡದಲ್ಲಿ ಸರ್ವಜ್ಞ ಕವಿಯು ಹೇಗೆ ಊರೂರು ತಿರುಗಿ ಜನರ ಸಂಕಷ್ಟಗಳನ್ನು, ಬದುಕನ್ನು ಹತ್ತಿರದಿಂದ ಕಂಡು ಕಾವ್ಯ ರಚಿಸಿದನೋ, ಅದೇ ರೀತಿ ವೇಮನರು ಕೂಡ ಸಂಚಾರಿಗಳಾಗಿ ತೆಲುಗಿನಲ್ಲಿ ಸಾಹಿತ್ಯ ರಚಿಸಿದ್ದಾರೆ. ಮಹಾಕವಿ, ಮಹಾಯೋಗಿಯಾಗಿ ರಚಿಸಿದ ಇವರ ಕಾವ್ಯಗಳು ಇಂದಿಗೂ ಜನಮಾನಸದಲ್ಲಿವೆ. ಅವರ ತತ್ವಗಳಲ್ಲಿ ಬುದ್ಧನ ಕರುಣೆ, ಅಂಬೇಡ್ಕರರ ಸಮಾನತೆ, ಕಬೀರರ ಧಾರ್ಮಿಕ ಸೌಹಾರ್ದತೆ, ಬಸವಣ್ಣ – ಕುವೆಂಪುರವರ ವಿಶ್ವಮಾನವ ಸಂದೇಶಗಳೆಲ್ಲವೂ ಇವೆ. ಇವರ ಹದಿನೈದು ಸಾವಿರಕ್ಕಿಂತಲೂ ಹೆಚ್ಚು ಪದ್ಯಗಳು ನಮಗೆ ಲಭ್ಯವಾಗಿವೆ. ಬ್ರಿಟಿಷ್ ಸರ್ಕಾರದ ಸೇವೆಯಲ್ಲಿದ್ದ ಸಿ.ಪಿ. ಬ್ರೌನ್ ಎಂಬ ಅಧಿಕಾರಿಯ ಪ್ರಯತ್ನದಿಂದ ವೇಮನರ ವಿಚಾರಗಳು, ಪದ್ಯಗಳು ಇಂಗ್ಲೀಷ್‌ಗೆ ಭಾಷಾಂತರಗೊಂಡು ಇಂದು ಬಹುತೇಕ ಭಾಷೆಗಳಲ್ಲಿ ಜನಪ್ರಿಯವಾಗಿವೆ. ವಿಶ್ವಧಾಭಿರಾಮ ಕೇಳು ವೇಮ ಎಂಬ ಅಂಕಿತನಾಮದಿಂದ ರಚಿಸಿದ ವೇಮನರು ತಮ್ಮ ಅರಮನೆಯ ಆಭರಣ ತಯಾರಿಕೆಯ ಕಾರ್ಯಾಗಾರದ ಅಕ್ಕಸಾಲಿಗನಾದ ಅಭಿರಾಮಾಚಾರ್ಯ ಎಂಬ ವ್ಯಕ್ತಿ ಅವರ ಜ್ಞಾನದ ಅಭಿವೃದ್ಧಿಗೆ ಕಾರಣರಾದ ಪರಿಣಾಮವಾಗಿ ಅವನ ಹೆಸರಿನಲ್ಲಿ ವಿಶ್ವಧಾಭಿರಾಮ ಎಂಬ ಅಂಕಿತನಾಮವನ್ನು ಸೇರಿಸಿದರು ಎನ್ನಲಾಗುತ್ತದೆ.

ಕ್ರಿ.ಶ 1480ರಲ್ಲಿ ಶಾರ್ವರಿ ನಾಮ ಸಂವತ್ಸರ ಶ್ರೀರಾಮ ನವಮಿಯ ದಿನದಂದು ಅನಂತಪುರದ ಕಡಪ ಜಿಲ್ಲೆಯ ಕದಿರು ತಾಲೂಕಿನ ಕಟಾರುಪಲ್ಲಿಯಲ್ಲಿ ಐಕ್ಯರಾದರು. ಈಗಲೂ ಅವರ ಸಮಾಧಿ ಅಲ್ಲಿದೆ. ಅದೊಂದು ತಪೋಕ್ಷೇತ್ರ. ಪುಣ್ಯಕ್ಷೇತ್ರ. ಪಾವನ ನೆಲವಾಗಿದೆ. ಅನೇಕ ಜಾತ್ರೆ ಉತ್ಸವಗಳು ಇಂದಿಗೂ ವೇಮನರ ಹೆಸರಿನಲ್ಲಿ ನಡೆಯುತ್ತಲಿವೆ.

ವೇಮನರು ಸರಳತೆಯಿಂದ ನೈಜವಾಗಿ ಬದುಕಿ ಸಂತ ಜೀವನಕ್ಕೆ ಮಾದರಿಯಾಗಿದ್ದರು. ಇವರ ಸಾಹಿತ್ಯ, ವಿಚಾರಗಳು ಜನರ ಮನಸ್ಸಿಗೆ ಭರವಸೆ ನೀಡಿ ಜೀವನದ ಕಷ್ಟಕೋಟಲೆ, ನೋವುಗಳಿಗೆ ಸಾಂತ್ವನ ನೀಡುತ್ತವೆ. ಅವರ ವಿಚಾರಗಳು ವಾಸ್ತವ ಬದುಕಿಗೆ ಹಿಡಿದ ಕೈಗನ್ನಡಿಯಾಗಿವೆ.



–ಶಾಂತಗೌಡ ಮರಿಗೌಡರ,
ಶಿಕ್ಷಕರು, ಶ್ಯಾಗೋಟಿ.

# ರಾಜ್ಯದಲ್ಲಿ ಕಾನೂನು ಸುವ್ಯವಸ್ಥೆ ಹದಗೆಟ್ಟಿದೆ

■ ವಿಜಯಸಾಕ್ಷಿ ಸುದ್ದಿ, ಗದಗ



ರಾಜ್ಯದಲ್ಲಿ ಒಂದೂವರೆ ವರ್ಷದ ಹಿಂದೆ ಅಧಿಕಾರಕ್ಕೆ ಬಂದಿರುವ ರಾಜ್ಯ ಸರ್ಕಾರ ಆಡಳಿತ ನಡೆಸುವಲ್ಲಿ ಸಂಪೂರ್ಣವಾಗಿ ವಿಫಲ ವಾಗಿದ್ದು, ರಾಜ್ಯದಲ್ಲಿ ಕಾನೂನು ಸುವ್ಯವಸ್ಥೆ ಸಂಪೂರ್ಣವಾಗಿ ಹದಗೆಟ್ಟಿದೆ ಎಂದು ಜಿಲ್ಲಾ ಬಿಜೆಪಿ ವಕ್ತಾರ ಎಂ.ಎಂ. ಹಿರೇಮಠ ರಾಜ್ಯ ಸರ್ಕಾರದ ಆಡಳಿತವನ್ನು ಖಂಡಿಸಿದ್ದಾರೆ.

ಈ ಕುರಿತು ಪತ್ರಿಕಾ ಹೇಳಿಕೆ ನೀಡಿರುವ ಅವರು, ಬೀದರ ನಗರದಲ್ಲಿ ಹಾಡುಹಗಲೆ 93 ಲಕ್ಷ ಹಣವನ್ನು ದರೋಡೆ ಮಾಡಿ ಇಬ್ಬರು ಅಮಾಯಕರನ್ನು ಹತ್ಯೆ ಮಾಡಿದ್ದಾರೆ. ಸ್ವತಃ ಮುಖ್ಯಮಂತ್ರಿಗಳು ಮಂಗಳೂರು ಜಿಲ್ಲಾ ಪ್ರವಾಸದ ಸಂದರ್ಭದಲ್ಲಿ ಮಂಗಳೂರಿನ ಕೋಟೇಶ್ವರ ಸಹಕಾರ ಬ್ಯಾಂಕ್‌ನಲ್ಲಿದ್ದ ಸುಮಾರು 10–15 ಕೋಟಿ ಬೆಲೆಯ ಬಂಗಾರ, ನಗದು ಹಣವನ್ನು ದರೋಡೆ ಮಾಡಲಾಗಿದ್ದು, ಇನ್ನೂ ಆರೋಪಿಗಳ ಬಂಧನವಾಗಿಲ್ಲ. ಈ ಪ್ರಕರಣ ನಡೆದ ಕೂಡಲೇ ಟೋಲ್ ನಾಕಾಗಳಲ್ಲಿ ಸರಿಯಾಗಿ ತಪಾಸಣೆ ಮಾಡಿದ್ದರೆ ದರೋಡೆಕೋರರು ಸಿಗಬಹುದಿತ್ತು.

ರಾಜ್ಯದಲ್ಲಿ ಗೃಹ ಇಲಾಖೆಯು ಸಂಪೂರ್ಣವಾಗಿ ವಿಫಲವಾಗಿದೆ. ರಾಜ್ಯದಲ್ಲಿ ಯಾರಿಗೂ ಸುರಕ್ಷತೆ ಇಲ್ಲವಾಗಿದೆ. ರಾಜ್ಯದಲ್ಲಿ ಬ್ಯಾಂಕ್‌ಗಳಿಗೆ ಸುರಕ್ಷೆ ಇಲ್ಲದಾಗಿದೆ. ರಾಜ್ಯದಲ್ಲಿ ದಿನನಿತ್ಯ ಹಗಲು ದರೋಡೆ, ಕೊಲೆಗಳು ನಡೆಯುತ್ತಿವೆ.

ಈ ಬಗ್ಗೆ ಗೃಹ ಸಚಿವರನ್ನು ಕೇಳಿದರೆ ಮಾಹಿತಿ ಬಂದಿಲ್ಲ ಎನ್ನುತ್ತಾರೆ. ಇಂತಹ ಪ್ರಕರಣಗಳು ದಿನನಿತ್ಯ ನಡೆಯುತ್ತಿದ್ದು, ರಾಜ್ಯದ ಜನ ಬೆಚ್ಚಿಬಿದ್ದಿದ್ದಾರೆ.

ಇನ್ನಾದರೂ ರಾಜ್ಯ ಸರ್ಕಾರದ ಮಂತ್ರಿಗಳು ಸರಿಯಾಗಿ ಕೆಲಸ ಮಾಡಿ ರಾಜ್ಯದಲ್ಲಿ ಜನರಿಗೆ ಒಳ್ಳೆಯ ಆಡಳಿತವನ್ನು ನೀಡಬೇಕೆಂದು ಜಿಲ್ಲಾ ವಕ್ತಾರರಾದ ಎಂ.ಎಂ. ಹಿರೇಮಠ, ಸಹ ವಕ್ತಾರರಾದ ದತ್ತಣ್ಣ ಜೋಶಿ, ಮಾಧ್ಯಮ ಪ್ರಮುಖ ರಾಜು ಹೊಂಗಲ, ಸಹ ಪ್ರಮುಖ ಶ್ರೀನಿವಾಸ ಹುಬ್ಬಳ್ಳಿ ರಾಜ್ಯ ಸರ್ಕಾರಕ್ಕೆ ಒತ್ತಾಯಿಸಿದ್ದಾರೆ.

### ಇಡಿಯಿಂದ ಮುಡಾ ಸ್ಥಿರಾಸ್ತಿ ಮುಟ್ಟುಗೋಲು

# ಸಿದ್ದರಾಮಯ್ಯ ರಾಜೀನಾಮೆಗೆ ಬಿಜೆಪಿ ಆಗ್ರಹ

■ ವಿಜಯಸಾಕ್ಷಿ ಸುದ್ದಿ, ಬೆಂಗಳೂರು

ಮುಡಾದ 142 ಸ್ಥಿರ ಆಸ್ತಿಗಳನ್ನು ಜಾರಿ ನಿರ್ದೇಶನಾಲಯ ಮುಟ್ಟುಗೋಲು ಹಾಕಿಕೊಂಡಿರುವ ಹಿನ್ನೆಲೆಯಲ್ಲಿ, ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ತಕ್ಷಣವೇ ರಾಜೀನಾಮೆ ನೀಡಬೇಕೆಂದು ಬಿಜೆಪಿ ಶನಿವಾರ ಒತ್ತಾಯಿಸಿದೆ. ಮುಟ್ಟುಗೋಲು ಹಾಕಿಕೊಂಡ ಆಸ್ತಿಗಳನ್ನು ರಿಯಲ್ ಎಸ್ಟೇಟ್ ಉದ್ಯಮಿಗಳು ಮತ್ತು ಏಜೆಂಟ್‌ಗಳಾಗಿ ಕೆಲಸ ಮಾಡುತ್ತಿರುವ ವಿವಿಧ ವ್ಯಕ್ತಿಗಳ ಹೆಸರಿನಲ್ಲಿ ನೋಂದಾಯಿಸಲಾಗಿದೆ ಎಂದು ಇಡಿ ಹೇಳಿದೆ. ಇಡಿಯಿಂದ

ಸಿದ್ದರಾಮಯ್ಯ ಮತ್ತು ಇತರರ ವಿರುದ್ಧದ ಪ್ರಕರಣಕ್ಕೆ ಸಂಬಂಧಿಸಿದಂತೆ, 2002ರ ಹಣ ಅಕ್ರಮ ವರ್ಗಾವಣೆ ತಡೆ ಕಾಯ್ದೆ (ಪಿಎಂಎಲ್‌ಎ) ನಿಬಂಧನೆಗಳ ಅಡಿಯಲ್ಲಿ ಸುಮಾರು 300 ಕೋಟಿ ರೂ. ಮಾರುಕಟ್ಟೆ ಮೌಲ್ಯದ 142 ಸ್ಥಿರ ಆಸ್ತಿಗಳನ್ನು ತಾತ್ಕಾಲಿಕವಾಗಿ ಮುಟ್ಟುಗೋಲು ಹಾಕಿಕೊಂಡಿರುವುದಾಗಿ ಜಾರಿ ನಿರ್ದೇಶನಾಲಯ (ಇಡಿ) ಶುಕ್ರವಾರ ತಿಳಿಸಿತ್ತು.

ಮುಡಾ ಹಗರಣದ ಬಗ್ಗೆ ವಿವರಿಸಿದ ಇಡಿ, "ಮುಡಾ ಸ್ವಾಧೀನಪಡಿಸಿಕೊಂಡ 3 ಎಕರೆ 16 ಗುಂಟೆ ಭೂಮಿಗೆ ಬದಲಾಗಿ



ತಮ್ಮ ಪತ್ನಿ ಶ್ರೀಮತಿ ಬಿ ಎಂ ಪಾರ್ವತಿ ಅವರ ಹೆಸರಿನಲ್ಲಿ 14 ನಿವೇಶನಗಳ (ಪ್ಲಾಟ್‌ಗಳು) ಪರಿಹಾರವನ್ನು ಪಡೆಯಲು ಸಿದ್ದರಾಮಯ್ಯ ತಮ್ಮ ರಾಜಕೀಯ ಪ್ರಭಾವವನ್ನು ಬಳಸಿದ್ದಾರೆ ಎಂದು ಆರೋಪಿಸಲಾಗಿದೆ. ಈ ಭೂಮಿಯನ್ನು ಮೂಲತಃ ಮುಡಾ 3,24,700 ರೂ.ಗಳಿಗೆ ಸ್ವಾಧೀನಪಡಿಸಿಕೊಂಡಿತ್ತು. ಐಷಾರಾಮಿ ಪ್ರದೇಶದಲ್ಲಿ 14 ನಿವೇಶನಗಳ ರೂಪದಲ್ಲಿ ನೀಡಲಾದ ಪರಿಹಾರವು 56 ಕೋಟಿ ರೂ. (ಅಂದಾಜು) ಮೌಲ್ಯದ್ದಾಗಿದೆ" ಎಂದು ಇಡಿ ಹೇಳಿದೆ.

ಪಾರ್ವತಿ ಅವರಿಗೆ ಅಕ್ರಮವಾಗಿ ಪರಿಹಾರ ನಿವೇಶನಗಳನ್ನು ಹಂಚಿಕೆ ಮಾಡುವಲ್ಲಿ ಮಾಜಿ ಮುಡಾ ಆಯುಕ್ತ ಡಿ ಬಿ ನಟೇಶ್ ಪಾತ್ರವು ಪ್ರಮುಖ ಪಾತ್ರ ವಹಿಸಿದೆ ಎಂದು ಇಡಿ ಆರೋಪಿಸಿದೆ. ಇಡಿಯಿಂದ

ಮೈಸೂರು ನಗರಾಭಿವೃದ್ಧಿ ಪ್ರಾಧಿಕಾರ (ಮುಡಾ) ನಿವೇಶನ ಹಂಚಿಕೆ ಹಗರಣದ ವಿರುದ್ಧದ ಹೋರಾಟದಲ್ಲಿ ಇದು ಪ್ರಮುಖ ವಿಜಯ ಎಂದು ಬಿಜೆಪಿ ರಾಜ್ಯಾಧ್ಯಕ್ಷ ಬಣ್ಣಿಸಿದ್ದಾರೆ.

ಈ ಬಗ್ಗೆ ಪ್ರತಿಕ್ರಿಯಿಸಿರುವ ರಾಜ್ಯ ಬಿಜೆಪಿ ಅಧ್ಯಕ್ಷ ವಿಜಯೇಂದ್ರ, ಇಡಿ ತನಿಖೆಯು ಸಿದ್ದರಾಮಯ್ಯ ಅವರ ಪತ್ನಿಯ ಹೆಸರಿನಲ್ಲಿ ಅಕ್ರಮವಾಗಿ ನಿವೇಶನಗಳನ್ನು ಹಂಚಿಕೆ ಮಾಡಲು ತಮ್ಮ ರಾಜಕೀಯ ಪ್ರಭಾವವನ್ನು ಬಳಸಿದ್ದಾರೆ ಎಂದು ಆರೋಪಿಸಿ ಇಡಿ ತನಿಖೆ ನಡೆಸುತ್ತಿದೆ. ಪ್ರಭಾವಿ ವ್ಯಕ್ತಿಗಳ 'ಬೇನಾಮಿ' ಮತ್ತು ಡಮ್ಮಿಗಳಿಗೆ ನಿವೇಶನಗಳ ಹಂಚಿಕೆಯು ವ್ಯವಸ್ಥಿತ ಭ್ರಷ್ಟಾಚಾರವನ್ನು ಮತ್ತಷ್ಟು ಎತ್ತಿ ತೋರಿಸುತ್ತದೆ ಎಂದು ಅವರು ಆರೋಪಿಸಿದ್ದಾರೆ.

ಕರ್ನಾಟಕ ಹೈಕೋರ್ಟ್ ಕೂಡ ರಾಜ್ಯಪಾಲರ ನಿರ್ಧಾರವನ್ನು ಎತ್ತಿಹಿಡಿದಿದೆ ಎಂಬುವುದನ್ನು ಎತ್ತಿತೋರಿಸಿರುವ ವಿಜಯೇಂದ್ರ, ಮುಖ್ಯಮಂತ್ರಿ ಕುಟುಂಬದ ವಿರುದ್ಧದ ಆರೋಪಗಳು ತೀವ್ರ ತನಿಖೆಗೆ ಅರ್ಹವಾಗಿವೆ ಎಂದು ಒತ್ತಿ ಹೇಳಿದ್ದಾರೆ.

## ಜಾತ್ರೆಯಲ್ಲಿ ಉಚಿತವಾಗಿ ಶುದ್ಧ ಕುಡಿಯುವ ನೀರಿನ ಪೂರೈಕೆ

■ವಿಜಯಸಾಕ್ಷಿ ಸುದ್ದಿ, ಕೊಪ್ಪಳ

ಶ್ರೀ ಗವಿಸಿದ್ದೇಶ್ವರ ಜಾತ್ರಾ ಮಹೋತ್ಸವ ನಿಮಿತ್ಯ ನಾಡಿನ ಅನೇಕ ಭಕ್ತರು ವಿವಿಧ ವಿಶಿಷ್ಟ ಭಕ್ತಿ ಸೇವೆಗಳನ್ನು ಸಲ್ಲಿಸುವುದರ ಮೂಲಕ ಭಕ್ತಿ ಅರ್ಪಿಸುತಿದ್ದಾರೆ. ಜಾತ್ರೆಗೆ ಬಂದ ಭಕ್ತಾದಿಗಳಿಗೆ ಶುದ್ಧವಾಧ ಕುಡಿಯುವ ನೀರಿನ ಸೌಲಭ್ಯವನ್ನು ಉಚಿತವಾಗಿ ಕಲ್ಪಿಸಲಾಗಿದೆ. ಕಿರ್ಲೋಸ್ಕರ್ ಇಂಡಸ್ಟ್ರೀಸ್ ವತಿಯಿಂದ ಗವಿಮಠದ ಆವರಣದಲ್ಲಿರುವ ಶಿಕ್ಷಣ ಮಹಾವಿದ್ಯಾಲಯದ ಪಕ್ಕದಲ್ಲಿ ದಿನಾಂಕ15.01.25 ರಿಂದ 21.01.25 ರವರೆಗೆ ಉಚಿತ ಕುಡಿಯುವ ನೀರಿನ ವಿತರಣೆ ಹಾಗೂ ಕೆ.ಜಿ.ಪಿ ಗೋಲ್ಡ ಜುವೇಲರ್ಸ ಅವರ ವತಿಯಿಂದ ಜಾತ್ರಾ ಮಹಾದಾಸೋಹಕ್ಕೆ ಹೋಗುವ ದಾರಿಯಲ್ಲಿ ದಿನಾಂಕ 15.01.25 ರಿಂದ 24.01.25 ರವರೆಗೆ ನೀರಿನ ವ್ಯವಸ್ಥೆಯನ್ನು ಕಲ್ಪಿಸಲಾಗಿದೆ. ಶುದ್ಧ ಕುಡಿಯುವ ನೀರನ್ನು ಬೆಳಗಿನಿಂದ ರಾತ್ರಿಯವರೆಗೂ ವಿತರಿಸಲಾಗುತ್ತಿದೆ. ಮೂರು ದಿಗಳ ಕಾಲ ಶಾಂತಿವನದಲ್ಲಿ ನಡೆಯುವ ಅನ್ವೇಷಣಾ ಆಧ್ಯಾತ್ಮಿಕ ಕಾರ್ಯಕ್ರಮಕ್ಕೆ ಗವೀಶ್ರೀ ನಗರದ ವರುಣ್ ಇವರಿಂದ ಉಚಿತವಾಗಿ ಶುದ್ಧ ಕುಡಿಯುವ ನೀರಿನ ಪೂರೈಸಿದ್ದಾರೆ. ಸರ್ವ ದಾನಿಗಳಿಗೆ ಪರಮ ಪೂಜ್ಯರು ಪ್ರಶಂಶಿಸಿ ಆಶೀರ್ವದಿಸಿದ್ದಾರೆ ಎಂದು ಗವಿಮಠದ ಪ್ರಕಟಣೆ ತಿಳಿಸಿದೆ.

## ಸೈಫ್ ಅಲಿ ಖಾನ್ ಇರಿತ ಪ್ರಕರಣ: ಛತ್ತೀಸ್‌ಗಢದಲ್ಲಿ ಆರೋಪಿ ಬಂಧನ

■ವಿಜಯಸಾಕ್ಷಿ ಸುದ್ದಿ, ಮುಂಬೈ

ಬಾಲಿವುಡ್ ನಟ ಸೈಫ್ ಅಲಿ ಖಾನ್ ಅವರನ್ನು ಮುಂಬೈನ ಅವರ ಮನೆಯೊಳಗೆ ಹಲವು ಬಾರಿ ಇರಿದ ಕೆಲವು ದಿನಗಳ ನಂತರ, ಛತ್ತೀಸ್‌ಗಢದಲ್ಲಿ ಒಬ್ಬ ಶಂಕಿತನನ್ನು ಬಂಧಿಸಲಾಗಿದೆ.

### ಗದಗ ಜಿಲ್ಲಾ ವಾಣಿಜ್ಯೋದ್ಯಮ ಸಂಸ್ಥೆಯಲ್ಲಿ ದತ್ತಿ ಉಪನ್ಯಾಸ, ವಿಚಾರ ಸಂಕಿರಣ

# ನಿಗದಿತ ದಿನಾಂಕದೊಳಗೆ ತೆರಿಗೆ ಪಾವತಿಸಿ

■ವಿಜಯಸಾಕ್ಷಿ ಸುದ್ದಿ, ಗದಗ

2017-2018, 2018-19 ಹಾಗೂ 2019-20ನೇ ಸಾಲಿನ ಸರಕು ಮತ್ತು ಸೇವಾ ತೆರಿಗೆಯಲ್ಲಿ ತೆರಿಗೆ ಬಡ್ಡಿ, ವ ದಂಡ ಹಾಕಿದ್ದರೆ ಅದಕ್ಕೆ ಬಡ್ಡಿ ವ ದಂಡ ಮಾನ್ನಾ ಮಾಡುವ ಯೋಜನೆಯು 1ನೇ ಜನವರಿ 2025ರಿಂದ 31/3/2025ರವರೆಗೆ ಜಾರಿಯಲ್ಲಿ ಇರುತ್ತದೆ. ಎಲ್ಲಾ ವ್ಯಾಪಾರಸ್ಥರು ಮತ್ತು ವಾಣಿಜ್ಯೋದ್ಯಮಿಗಳು ಹಾಗೂ ತೆರಿಗೆ ವ್ಯಾಪ್ತಿಗೆ ಒಳಪಡುವ ಗ್ರಾಹಕರು ಸದರಿ ಯೋಜನೆಯ ಸದುಪಯೋಗವನ್ನು ಪಡೆದುಕೊಳ್ಳಬೇಕೆಂದು ಧಾರವಾಡ ವಾಣಿಜ್ಯ ತೆರಿಗೆ ಇಲಾಖೆ ಸರಕು ಮತ್ತು ಸೇವಾ ತೆರಿಗೆ (ಆಡಳಿತ) ಜಂಟಿ ಆಯುಕ್ತರಾದ ಸುಕನ್ಯಾ ನಾಯಕ ಕರೆ ನೀಡಿದರು.



ಗದಗ ಜಿಲ್ಲಾ ವಾಣಿಜ್ಯೋದ್ಯಮ ಸಂಸ್ಥೆ, ಗದಗ ಜಿಲ್ಲಾ ತೆರಿಗೆ ಸಲಹೆಗಾರರ ಸಂಘ, ಗದಗ ಹಾಗೂ ಚಾಪ್ಟರ್ ಆಪ್ ಚಾರ್ಟರ್ಡ್ ಅಕೌಂಟಂಟ್ಸ್ ಗದಗ ಇವರುಗಳ ಸಂಯುಕ್ತ ಆಶ್ರಯದಲ್ಲಿ ಲಿಂ. ಬಸಣ್ಣಾ ದುಂಡಪ್ಪ ಮಲ್ಲಾಡದ, ಲಿಂ. ಚನ್ನಬಸಪ್ಪ ಮಹಾದೇವಪ್ಪ ರಾಮನಕೊಪ್ಪ, ಲಿಂ. ಚಂದ್ರಶೇಖರಯ್ಯ ಶಿವಯ್ಯ ಶಾಬಾದಿಮಠ, ಲಿಂ. ತಿರಕಪ್ಪ ಚನ್ನಪ್ಪ ಹುಬ್ಬಳ್ಳಿ ದಿ. ದೇವಿಚಂದ ಲಖಮಾಜಿ ಪಾಲರೇಚಾ ಇವರುಗಳ ಸ್ಮಾರಕ ದತ್ತಿ ಉಪನ್ಯಾಸದಲ್ಲಿ ಜಿ.ಎಸ್.ಟಿ. ಬಡ್ಡಿ ವ ದಂಡ ಮನ್ನಾ ಮಾಡುವ ಯೋಜನೆ ಕುರಿತು ವಿಚಾರ ಸಂಕಿರಣವನ್ನು ಉದ್ಘಾಟಿಸಿ ಅವರು ಮಾತನಾಡಿದರು.

ಅತಿಥಿ ಉಪನ್ಯಾಸಕರಾಗಿ ಆಗಮಿಸಿದ ಹುಬ್ಬಳ್ಳಿ ವಾಣಿಜ್ಯ ತೆರಿಗೆ ಇಲಾಖೆ ಸರಕು ಮತ್ತು ಸೇವಾ ತೆರಿಗೆ (ಜಾರಿ) ಜಂಟಿ ಆಯುಕ್ತರಾದ ರವಿಕುಮಾರ ಎನ್ ಮಾತನಾಡುತ್ತಾ, ಈ ಯೋಜನೆಯನ್ನು ಸದುಪಯೋಗಪಡಿಸಿಕೊಳ್ಳಬೇಕು ಮತ್ತು ದಿನಾಂಕದ ಒಳಗಾಗಿ ತೆರಿಗೆ ಪಾವತಿ ಮಾಡಿ ಬಡ್ಡಿ ವ ದಂಡದಿಂದ ಮುಕ್ತರಾಗಬೇಕು. ತಮ್ಮ ತೆರಿಗೆ ಪಾವತಿಯಿಂದ ರಾಜ್ಯದ ಅಭಿವೃದ್ಧಿಗೆ ಹೆಚ್ಚಿನ ಅನುಕೂಲವಾಗುತ್ತದೆ. ಜೊತೆಗೆ ತಮಗೆ ಈ ಯೋಜನೆಯಿಂದ ಬಡ್ಡಿ ಮತ್ತು ದಂಡ ಮನ್ನಾ ಪಡೆಯಬಹುದೆಂದು ತಿಳಿಸಿದರು.

ವಾಣಿಜ್ಯ ತೆರಿಗೆ ಇಲಾಖೆಯ ಉಪ ಆಯುಕ್ತರಾದ ಶಂಕರ ಬೆಳ್ಳುಬ್ಬಿ ಮಾತನಾಡಿ, ಯೋಜನೆಯ ಬಗ್ಗೆ ಮಾಹಿತಿ ನೀಡುತ್ತಾ, ಕೊನೆಯ ತಾರೀಖಿನವರೆಗೆ ಕಾಯದೆ, ಆದಷ್ಟು ಬೇಗನೆ ತೆರಿಗೆ ಪಾವತಿ ಮಾಡಿ ಬಡ್ಡಿ ವ ದಂಡ ಮನ್ನಾ ಮಾಡಿಕೊಳ್ಳಬೇಕು. ಸೆಕ್ಷನ್ 128ಎ ಪ್ರಕಾರ ಎಸ್‌ಪಿ.ಎಲ್. 01, ಅಥವಾ ಎಸ್‌ಪಿಎಲ್ 02ರಲ್ಲಿ ಅರ್ಜಿ ತುಂಬಿ ಆನ್‌ಲೈನ್ ಮುಖಾಂತರ ಸಲ್ಲಿಸಬೇಕೆಂದು ತಿಳಿಸಿದರು.

ವಿಚಾರ ಸಂಕಿರಣದ ಅಧ್ಯಕ್ಷತೆಯನ್ನು ವಹಿಸಿದ ಸಂಸ್ಥೆಯ ಅಧ್ಯಕ್ಷರಾದ ತಾತನಗೌಡ ಎಸ್. ಪಾಟೀಲ ಮಾತನಾಡುತ್ತಾ, ಜಿ.ಎಸ್.ಟಿಯಲ್ಲಿ ಬಡ್ಡಿ ವ ದಂಡ ಮಾಡುವ ಯೋಜನೆ ಜಾರಿಗೆ ಬಂದಿದ್ದು, ಇದರ ಸದುಪಯೋಗವನ್ನು ಪಡೆದುಕೊಳ್ಳಬೇಕು. ನಿಗದಿತ ದಿನಾಂಕದೊಳಗೆ ತೆರಿಗೆ ಪಾವತಿ ಮಾಡಿದಲ್ಲಿ ಬಡ್ಡಿ ವ ದಂಡ ಮನ್ನಾ ಪಡೆಯಬಹುದು ಮತ್ತು ಈ ಯೋಜನೆಯಿಂದ ರಾಜ್ಯದ ಅಭಿವೃದ್ಧಿಗೆ ಹೆಚ್ಚಿನ ಸಹಕಾರಿಯಾಗುತ್ತದೆಂದು ತಿಳಿಸಿದರು.

ಸಂಸ್ಥೆಯ ತೆರಿಗೆ ಉಪ ಸಮಿತಿ ಚೇರಮನ್ನರಾದ ಮಲ್ಲಿಕಾರ್ಜುನ ವ್ಹಿ.ಪಟ್ಟಣಶೆಟ್ಟಿ ಸ್ವಾಗತಿಸಿದರು. ಪ್ರಾಸ್ತಾವಿಕ ನುಡಿ ಹಾಗೂ ಲಿಂಗೈಕ್ಯರಾದ ಮಹನೀಯರ ಕಿರಿ ಪರಿಚಯವನ್ನು ಸಂಸ್ಥೆಯ ದತ್ತಿ ಉಪನ್ಯಾಸ ಉಪ ಸಮಿತಿ ಚೇರಮನ್ನರಾದ ಚಂದ್ರು ಬಾಳಿಹಳ್ಳಿಮಠ ಮಾಡಿದರು. ಸಂಸ್ಥೆಯ ಗೌರವ ಕಾರ್ಯದರ್ಶಿ ಅಶೋಕಗೌಡ ಕೆ.ಪಾಟೀಲ ಕಾರ್ಯಕ್ರಮ ನಿರೂಪಿಸಿದರು. ಸಂಸ್ಥೆಯ ಉಪಾಧ್ಯಕ್ಷ ವಿಜಯಕುಮಾರ ಎಸ್. ಮಾಟಲದಿನ್ನಿ ವಂದಿಸಿದರು ಎಂದು ಸಂಸ್ಥೆಯ ಗೌರವ ಕಾರ್ಯದರ್ಶಿ ಅಶೋಕಗೌಡ ಕೆ.ಪಾಟೀಲ ಪತ್ರಿಕಾ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

### ಕಲಾವೈಭವ 2025-ಜಿಲ್ಲಾ ಯುವ ಸಮಾವೇಶ ತರಬೇತಿ ಕಾರ್ಯಾಗಾರ

# ಮಲ್ಲಿಕಾರ್ಜುನ ಮಾಳಗಿಮನಿಗೆ ರಾಜ್ಯ ಯುವ ಪ್ರಶಸ್ತಿ ಪ್ರದಾನ



■ವಿಜಯಸಾಕ್ಷಿ ಸುದ್ದಿ, ಗದಗ

ಜಿಲ್ಲಾಡಳಿತ ದಕ್ಷಿಣ ಕನ್ನಡ, ಜಿಲ್ಲಾ ಪಂಚಾಯತ ಮಂಗಳೂರು, ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆ ಮಂಗಳೂರು, ಕರ್ನಾಟಕ ರಾಜ್ಯ ಯುವ ಸಂಘಗಳ ಒಕ್ಕೂಟ ಬೆಂಗಳೂರು ಹಾಗೂ ದಕ್ಷಿಣ ಕನ್ನಡ ಜಿಲ್ಲಾ ಯುವಜನ ಒಕ್ಕೂಟ ಮಂಗಳೂರು ಇವರುಗಳ ವತಿಯಿಂದ ಜಿಲ್ಲಾ ಯುವ ಸಮಾವೇಶ ತರಬೇತಿ ಕಾರ್ಯಾಗಾರ, ಶನಿವಾರ ಸರ್ಕಾರಿ ಉನ್ನತ ಹಿರಿಯ ಪ್ರಾಥಮಿಕ ಶಾಲೆ ಸವಣೂರು ಹಾಗೂ ಯುವಕ ಮಂಡಲ ಸವಣೂರು ಇವರುಗಳ ಸಹಕಾರದೊಂದಿಗೆ ರಾಜ್ಯ ಮಟ್ಟದ ಜನಪದ ನೃತ್ಯ ಸ್ಪರ್ಧೆ ಮತ್ತು ರಾಜ್ಯ ಯುವ ಪ್ರಶಸ್ತಿ ಪ್ರದಾನ ಸಮಾರಂಭವು ಶನಿವಾರ ದ.ಕ.ಜಿ.ಪಂ.ಉ. ಹಿರಿಯ ಪ್ರಾಥಮಿಕ ಶಾಲಾ ಆವರಣದಲ್ಲಿ ನಡೆಯಿತು.

ಈ ಸಂದಭದಲ್ಲಿ ಉತ್ತರಪ್ರಭ ಪ್ರಾದೇಶಿಕ ಕನ್ನಡ ದಿನಪತ್ರಿಕೆಯ ಕಾರ್ಯನಿರ್ವಾಹಕ ಸಂಪಾದಕ ಮಲ್ಲಿಕಾರ್ಜುನ ಮಾರುತಿ ಮಾಳಗಿಮನಿಯವರಿಗೆ ಗದಗ ಜಿಲ್ಲೆಯಿಂದ ರಾಜ್ಯ ಯುವ ಪ್ರಶಸ್ತಿಗೆ ಆಯ್ಕೆಯಾಗಿರು ನಿಮಿತ್ತ ಕರ್ನಾಟಕ ರಾಜ್ಯ ಯುವ ಸಂಘಗಳ ಒಕ್ಕೂಟದಿಂದ ಪ್ರಶಸ್ತಿ ನೀಡಿ ಗೌರವಿಸಲಾಯಿತು. ಇವರಿಗೆ ಮಾಜಿ ಸಂಸದ ನಳಿನ್ ಕುಮಾರ್ ಕಟೀಲ, ಶಾಸಕಿ ಭಾಗೀರತಿ ಮುರುಳ್ಯಾ, ಕರ್ನಾಟಕ ರಾಜ್ಯ ಯುವ ಸಂಘಗಳ ಒಕ್ಕೂಟದ ರಾಜ್ಯಾಧ್ಯಕ್ಷ ಡಾ. ಜಾನಪದ ಎಸ್.ಬಾಲಾಜಿ ಹಾಗೂ ರಾಜ್ಯ ಪ್ರದಾನ ಕಾರ್ಯದರ್ಶಿ ಸುರೇಶ್ ರೈ, ಜಿಲ್ಲಾ ಕೇಂದ್ರ ಸಹಕಾರಿ ಬ್ಯಾಂಕ್‌ನ ನಿರ್ದೇಶಕ ಪ್ರಶಸ್ತಿ ನೀಡಿ ಅಭಿನಂದನೆ ಸಲ್ಲಿಸಿದರು.

ಈ ಸಂದರ್ಭದಲ್ಲಿ ದ.ಕ ಜಿಲ್ಲಾ ಸಹಕಾರಿ ಯೂನಿಯನ್ ಅಧ್ಯಕ್ಷ ಶಶಿಕುಮಾರ್ ರೈ ಬಾಲ್ಯೊಟ್ಟು, ಸವಣೂರು ಗ್ರಾ.ಪಂ ಅಧ್ಯಕ್ಷೆ ಸುಂದರಿ ಬಿ.ಎಸ್ ಸವಣೂರು ಪ್ರಾ. ಕೃ.ಪ.ಸ.ಸಂಘದ ಅಧ್ಯಕ್ಷ ತಾರಾನಾಥ ಕಾಯರ್ಗ, ಎಪಿಎಂಸಿ ಮಾಜಿ ಅಧ್ಯಕ್ಷ ದಿನೇಶ್ ಮೆದು, ಕಡಬ ತಾಲೂಕು ಕೃಷಿಕ ಸಮಾಜದ ಅಧ್ಯಕ್ಷ ರಾಕೇಶ್ ರೈ ಕೆಡೆಂಜಿ, ಶಿವಪ್ರಸಾದ್ ಮೈಲೇರಿ, ಸವಣೂರು ಸ.ಉ.ಹಿ.ಪ್ರಾ.ಶಾಲಾಭಿವೃದ್ಧಿ ಸಮಿತಿ ಅಧ್ಯಕ್ಷ ಅಶ್ರಫ್ ಜನತಾ, ಮುಖ್ಯ ಶಿಕ್ಷಕ ನಿಂಗರಾಜು, ಬೆಳಗಾವಿ ಯುವಜನ ಒಕ್ಕೂಟದ ಅಧ್ಯಕ್ಷ ಸಿದ್ದಣ್ಣ ದುರದುಂಡಿ, ಕೊಡಗು ಜಿಲ್ಲಾಧ್ಯಕ್ಷ ಸುಕುಮಾರ್ ಹಾಗೂ ಮುಂತಾದವರಿದ್ದರು.

# ಬಿಸಿಯೂಟ ತಯಾರಕರಿಂದ ಪ್ರತಿಭಟನಾ ಧರಣಿ



■ವಿಜಯಸಾಕ್ಷಿ ಸುದ್ದಿ, ಕೊಪ್ಪಳ

ಅಕ್ಷರ ದಾಸೋಹದ ಬಿಸಿಯೂಟ ತಯಾರಕರ ಒಕ್ಕೂಟದ ಕೊಪ್ಪಳ ಘಟಕವು ರಾಜ್ಯ ಸಮಿತಿ ಕರೆ ನೀಡಿರುವ ರಾಜ್ಯಮಟ್ಟದ ಹೋರಾಟಕ್ಕೆ ಬೆಂಬಲಿಸಿ, ಕೊಪ್ಪಳ ತಾಲೂಕಿನ ಬಿಸಿಯೂಟ ನೌಕರರು ನಗರದ ಜಿಲ್ಲಾ ಆಡಳಿತ ಭವನದ ಮುಂಭಾಗದಲ್ಲಿ ಬೃಹತ್ ಪ್ರತಿಭಟನಾ ಧರಣಿ ನಡೆಸಿ, ಸರ್ಕಾರದ ಮಹಿಳಾ ವಿರೋಧಿ ಧೋರಣೆಯನ್ನು ಖಂಡಿಸಿ ಘೋಷಣೆಗಳನ್ನು ಕೂಗಿದರು.

ಜಿಲ್ಲಾಧಿಕಾರಿಗಳ ಅನುಪಸ್ಥಿತಿಯಲ್ಲಿ ಹಿರಿಯ ಅಧಿಕಾರಿಗಳ ಮುಖಾಂತರ ಮುಖ್ಯಮಂತ್ರಿಗಳಿಗೆ ಸಲ್ಲಿಸಿದ ಮನವಿಯಲ್ಲಿ, ತೀರ ಕಡಿಮೆ ಕೂಲಿಗೆ ಮಹಿಳೆಯರನ್ನು ದುಡಿಸಿಕೊಳ್ಳುವ ಕೇಂದ್ರ ಹಾಗೂ ರಾಜ್ಯ ಸರ್ಕಾರದ ಧೋರಣೆಗಳನ್ನು ತೀವ್ರವಾಗಿ ವಿರೋಧಿಸಿದ ನೌಕರರು, ತಮ್ಮ ಬಹಳ ವರ್ಷಗಳಿಂದ ನೆನೆಗುದಿಗೆ ಬಿದ್ದಿರುವ ಬೇಡಿಕೆಗಳನ್ನು ತಕ್ಷಣ ಈಡೇರಿಸುವಂತೆ ಒತ್ತಾಯಿಸಿದರು.

ಬಿಸಿಯೂಟ ನೌಕರರ ಮೇಲೆ ಆಗುತ್ತಿರುವ ದೌರ್ಜನ್ಯ ಕುರಿತಂತೆ ಕ್ರಮವಹಿಸಬೇಕು. ಬೇಸಿಗೆ ಸೂಟಿಯಲ್ಲಿ ಮಾಡಿರುವ ಎರಡು ತಿಂಗಳ ವೇತನವನ್ನು ಪಾವತಿಸಬೇಕು .

ಈ ನಮ್ಮ ಬೇಡಿಕೆಗಳನ್ನು ಸರ್ಕಾರ ಈಡೇರಿಸದಿದ್ದಲ್ಲಿ ಹೋರಾಟವನ್ನು ತೀವ್ರಗೊಳಿಸುವುದಾಗಿ ಸಂಘಟನೆ ಮುಖಂಡರು ಎಚ್ಚರಿಸಿದರು.

ಹೋರಾಟದ ನೇತೃತ್ವವನ್ನು ಬಸವರಾಜ ಶೀಲವಂತರ, ಮಹಾಂತೇಶ ಕೊತಬಾಳ, ಗಾಳೆಪ್ಪ ಮುಂಗೋಲಿ, ಮಕಬೂಲ್ ರಾಯಚೂರ, ಸಂಜಯದಾಸ್ ಕೌಜಗೇರಿ, ಶೇಕಪ್ಪ ಬೆಟಗೇರಿ, ಪುಷ್ಪ ಮೇಸ್ತ್ರಿ, ಸುಮಂಗಲ ಕೊತಬಾಳ, ಸುಮಾ ಲಾಚನಕೇರಿ, ಕುಸುಮ ಶಿವಪುರ, ಶರಣಮ್ಮ ಹೊಸ ಬಂಡಿಹರ್ಲಾಪುರ, ಲಲಿತಾ ಬೂದುಗುಂಪಿ, ಪದ್ಮ ಹುಲಿಗಿ, ನೇತ್ರಾವತಿ ಹಾಸಗಲ್ಲ ಮುಂತಾದವರು ವಹಿಸಿದ್ದರು.

## ಎರಡು ಬೈಕ್ ಗಳ ನಡುವೆ ಅಪಘಾತ: ಹಸೆಮಣೆ ಏರಬೇಕಿದ್ದ ಯುವತಿ ಮಸಣಕ್ಕೆ!

■ವಿಜಯಸಾಕ್ಷಿ ಸುದ್ದಿ, ಮಂಡ್ಯ

ಎರಡು ಬೈಕ್ ಗಳ ನಡುವೆ ಅಪಘಾತ ಸಂಭವಿಸಿ ಹಸೆಮಣೆ ಏರಬೇಕಿದ್ದ ಯುವತಿ ಸಾವನ್ನಪ್ಪಿರುವ ಘಟನೆ ಮಂಡ್ಯದ ಮಳವಳ್ಳಿಯ ಹೆಚ್ ಬಸಾಪುರ ಗೇಟ್ ಬಳಿ ನಡೆದಿದೆ. ಮಳವಳ್ಳಿಯ ಬಾಳೆಹೊನ್ನಿಗ ಗ್ರಾಮದ ಶರಣ್ಯ( 26) ಮೃತ ದುರ್ದೈವಿಯಾಗಿದ್ದು,

ನರೇಗಾ ಯೋಜನೆಯ ಇಂಜಿನಿಯರ್ ಆಗಿ ಕೆಲಸ ಮಾಡ್ತಿದ್ದ ಶರಣ್ಯ ಇನ್ನೂ 20 ದಿನಗಳಲ್ಲಿ ಹಸೆಮಣೆ ಏರಬೇಕಿದ್ದಳು ಎಂದು ತಿಳಿದು ಬಂದಿದೆ.

ಶನಿವಾರ ಗ್ರಾಮದಿಂದ ಹಲಗೂರು ಕಡೆ ಹೊರಟಿದ್ದಳು ಈ ವೇಳೆ ಹಿಂಬದಿಯಿಂದ ಬಂದು ಮತ್ತೊಂದು ಬೈಕ್ ಡಿಕ್ಕಿ ಹೊಡೆದಿದೆ.

ಡಿಕ್ಕಿ ರಭಸಕ್ಕೆ ಶರಣ್ಯ ತಲೆಗೆ ತೀವ್ರ ಪೆಟ್ಟಾಗಿತ್ತು ಹೀಗಾಗಿ ರಕ್ತ ಶ್ರಾವದಿಂದ ಸ್ಥಳದಲ್ಲೇ ಪ್ರಾಣಬಿಟ್ಟಿದ್ದಾಳೆ.

ಸ್ಥಳಕ್ಕೆ ಹಲಗೂರು ಪೊಲೀಸರ ಭೇಟಿ ನೀಡಿಪರಿಶೀಲನೆ ನಡೆಸಿದ್ದು, ಹಲಗೂರು ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲು ಮಾಡಲಾಗಿದೆ.



ನರಗುಂದ ತಾಲೂಕಿನ ಶಿರೋಳ ಗ್ರಾಮದ ಶ್ರೀ ತೋಂಟ-ದಾರ್ಯ ಮಠದ ಜಾತ್ರೆಯ ಶ್ರೀ ಸಿದ್ಧಲಿಂಗೇಶ್ವರ ರಥಕ್ಕೆ ಶಿರೋಳ ಗ್ರಾಮದ ಸಿದ್ಧಲಿಂಗೇಶ್ವರ ಆಟೋ ಚಾಲಕರ ಹಾಗೂ ಮಾಲಕರ ಸಂಘದ ಎಲ್ಲ ಸದಸ್ಯರು ಸೇರಿ ಪ್ರತಿ ವರ್ಷದಂತೆ ಈ ವರ್ಷವೂ ಕೂಡ ಮಾಲೆ ಹಾಕಿದರು. ಈ ಸಂದರ್ಭದಲ್ಲಿ ಶ್ರೀ ಮಠದ ಪೀಠಾಧ್ಯಕರಾದ ಪೂಜ್ಯ ಶಾಂತಲಿಂಗ ಮಹಾಸ್ವಾಮಿಗಳು, ತೋಂಟ-ದಾರ್ಯ ಮಠ ಶಿರೋಳ, ಆಟೋ ಚಾಲಕರ-ಮಾಲಕರ ಸಂಘದ ಹಣಮಂತ ಗಡ್ಡಿ, ಯಲ್ಲಪ್ಪ ಹಿರೇಮನಿ, ರಮೇಶ ಹಿರೇಮನಿ, ಚಂದ್ರು ಚಟ್ರಿಯವರ, ಮುತ್ತಪ್ಪ ಜಂಗಿನ, ಸಿದ್ದು ರಂಗಣ್ಣವರ, ಅಭಿಜಿತ್ ಹಿರೇಮನಿ, ರಾಕೇಶ ಬನ್ನಿಗಿಡದ, ಮಂಜು ರಾಥೋಡ್, ಸಿದ್ದು ತಳಗಡೆ, ಸಂತೋಷ ಮಡಿವಾಳರ, ಪ್ರಭು ಕಲ್ಲೂರು, ರಾಜು ಸಂಗಳದ, ಮಾಂತೇಶ ಸೂಡಿ, ಶಿವಾನಂದ ಹಾಳಿಯವರ, ವಿಜಯ ಹಾಳಿಯವರ ಉಪಸ್ಥಿತರಿದ್ದರು.

### ಕೃಷಿ ಮಹಾವಿದ್ಯಾಲಯದ ಅಮೃತ ಮಹೋತ್ಸವ ಉದ್ಘಾಟಿಸಿದ ಉಪರಾಷ್ಟ್ರಪತಿ ಜಗದೀಪ ಧನಕರ್

# ಕೃಷಿ ಕ್ಷೇತ್ರದಲ್ಲಿ ಹೆಚ್ಚು ಸಂಶೋಧನೆಗಳಾಗಲಿ

■ವಿಜಯಸಾಕ್ಷಿ ಸುದ್ದಿ, ಧಾರವಾಡ

ಆಹಾರ ಉತ್ಪನ್ನಗಳ ಉತ್ಪಾದನೆಯಲ್ಲಿ ನಾವು ಸ್ವಾವಲಂಬಿಗಳಾಗಿದ್ದು, ಮೌಲ್ಯವರ್ಧಿತ ಆಹಾರ ಉತ್ಪನ್ನಗಳ ಹೆಚ್ಚಳಕ್ಕಾಗಿ ಕೃಷಿ ಕ್ಷೇತ್ರದಲ್ಲಿ ಹೆಚ್ಚು ಸಂಶೋಧನೆಗಳಾಗಬೇಕು ಮತ್ತು ಸಿ.ಎಸ್.ಆರ್, ಐ.ಸಿ.ಎ.ಆರ್ ನಿಧಿಗಳ ಬಳಕೆಗೆ ಕೃಷಿ ಸಂಶೋಧನೆ ಕ್ಷೇತ್ರದಲ್ಲಿ ಆದ್ಯತೆ ನೀಡಬೇಕೆಂದು ಉಪರಾಷ್ಟ್ರಪತಿ ಜಗದೀಪ ಧನಕರ್ ಹೇಳಿದರು.




ಅವರು ಧಾರವಾಡ ಕೃಷಿ ವಿಶ್ವವಿದ್ಯಾಲಯದ ಕೃಷಿ ಮಹಾವಿದ್ಯಾಲಯ ಅಮೃತ ಮಹೋತ್ಸವ ಹಾಗೂ ಹಳೆಯ ವಿದ್ಯಾರ್ಥಿಗಳ ಸಮ್ಮಿಲನ ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿದರು.

ಕೃಷಿ ಭಾರತದ ಆರ್ಥಿಕತೆಯ ಬೆನ್ನೆಲುಬು, ರೈತರ ತಲಾ ಆದಾಯವನ್ನೂ ಇನ್ನು ಎಚಿಟು ಪಟ್ಟು ಹೆಚ್ಚಿಸುವ ಗುರಿಯನ್ನು ಕೇಂದ್ರ ಸರಕಾರ ಹೊಂದಿದೆ. ಇದಕ್ಕೆ ಪೂರಕವಾದ ಚಟುವಟಿಕೆಗಳನ್ನು ಹಮ್ಮಿಕೊಳ್ಳಲು ಅನುವಾಗುವಂತೆ ಕೃಷಿಯಲ್ಲಿ ಸಾಂಪ್ರದಾಯಿಕತೆ ಉಳಿಸಿಕೊಂಡು ಆಧುನಿಕತೆ ಅಳವಡಿಸಿಕೊಳ್ಳಲು ಅನೇಕ ಯೋಜನೆಗಳನ್ನು ಜಾರಿಗೊಳಿಸಿದೆ ಎಂದು ತಿಳಿಸಿದರು.

ಕೃಷಿಗೆ ಭಾರತ ಸರಕಾರ ಮೊದಲಿನಿಂದಲೂ ಆದ್ಯತೆ ನೀಡಿದೆ. ರೈತರ ಹೊಲಗಳು ಸಮೃದ್ಧ ಬೆಳೆಗಳಿಂದ ಬೆಳೆದಾಗ ಮಾತ್ರ ದೇಶವು ಹೊಳೆಯುತ್ತದೆ. ಎಲ್ಲ ಸಂಶೋಧನೆಗಳು ಪ್ರಯೋಗಾಲಯದಿಂದ ನೇರವಾಗಿ ರೈತರ ತೋಟಗಳಿಗೆ ತಲುಪಬೇಕು. ತಜ್ಞರು, ಸಂಶೋಧಕರ ಲಾಭವನ್ನು ರೈತರು ಪಡೆದುಕೊಳ್ಳಬೇಕು. ಅಂದಾಗ ಕೃಷಿ ವಿಶ್ವವಿದ್ಯಾಲಯ, ಕೃಷಿ ಮಹಾವಿದ್ಯಾಲಯಗಳ ಸೇವೆ ಸಾರ್ಥಕವಾಗುತ್ತದೆ ಎಂದು ಉಪರಾಷ್ಟ್ರಪತಿಗಳು ಹೇಳಿದರು.

ಘನ ಉಪಸ್ಥಿತಿ ವಹಿಸಿದ್ದ ರಾಜ್ಯಪಾಲ ಥಾವರಚಂದ್ ಗೆಹ್ಲೋಟ್ ಮಾತನಾಡಿ, ಭಾರತೀಯರಿಗೆ ಕೃಷಿ ಮೂಲ ಉದ್ಯೋಗವಾಗಿದೆ. ದೇಶದ ಅಭಿವೃದ್ಧಿಗೆ ಇದು ಪೂರಕವಾಗಿದೆ. ಪ್ರತಿ ಕ್ಷೇತ್ರದಲ್ಲಿ ಸ್ಪರ್ಧೆ ಇರುವಂತೆ ಕೃಷಿಯಲ್ಲಿಯೂ ಸ್ಪರ್ಧೆ ಏರ್ಪಟ್ಟಿದೆ. ಕೃಷಿಯಲ್ಲಿ ಆಧುನಿಕ ಪದ್ಧತಿಗಳನ್ನು ಅಳವಡಿಸಿ, ಆದಾಯ ಹೆಚ್ಚಿಸಲು ಕ್ರಮವಹಿಸಬೇಕು. ರೈತರಿಗೆ ಹೆಚ್ಚು ಲಾಭ ಮತ್ತು ಉಪಯುಕ್ತವಾಗುವ ಕೃಷಿ ಸಂಶೋಧನೆಗಳನ್ನು ತಜ್ಞರು, ವಿಜ್ಞಾನಿಗಳು, ವಿದ್ಯಾರ್ಥಿಗಳು ಮಾಡಬೇಕೆಂದು ತಿಳಿಸಿದರು.

ಕೇಂದ್ರ ಗ್ರಾಹಕರ ವ್ಯವಹಾರಗಳ, ಆಹಾರ ಮತ್ತು ಸಾರ್ವಜನಿಕ ವಿತರಣೆ ಮತ್ತು ಹೊಸ ಹಾಗೂ ನವೀಕರಿಸಬಹುದಾದ ಇಂಧನ ಸಚಿವರಾದ ಪ್ರಲ್ಹಾದ ಜೋಶಿ ಮಾತನಾಡಿ, ಧಾರವಾಡ ಕೃಷಿ ವಿಶ್ವವಿದ್ಯಾಲಯ ಜನಸಾಮಾನ್ಯರ ಅದರಲ್ಲೂ ಸಾಮಾನ್ಯ ರೈತರ ವಿಶ್ವವಿದ್ಯಾಲಯವಾಗಿದೆ. ಕೃಷಿ ಕ್ಷೇತ್ರಕ್ಕೆ ಮಹತ್ವದ ಕೊಡುಗೆಗಳನ್ನು ನೀಡಿದೆ. ಕೃಷಿ ಮಹಾವಿದ್ಯಾಲಯಕ್ಕೆ 75 ವರ್ಷ ಪೂರ್ಣಗೊಂಡು, ಅಮೃತ ಮಹೋತ್ಸವ ಆಚರಿಸುತ್ತಿರುವುದು ಸಂತಸ ತಂದಿದೆ ಎಂದರು.

ಧಾರವಾಡ ಕೃಷಿ ವಿಶ್ವವಿದ್ಯಾಲಯ ಆವರಣದಲ್ಲಿ ಕೇಂದ್ರ ಸರಕಾರದಿಂದ ಹವಾಮಾನ ಸಂಶೋಧನಾ ಕೇಂದ್ರ ಸ್ಥಾಪಿಸಲು ಅನುಮತಿ ದೊರೆತಿದ್ದು, ಇದು ಸುಮಾರು 175 ಕಿ.ಮೀ. ವ್ಯಾಪ್ತಿಯಲ್ಲಿ ಇರುವ ನಿಖರವಾದ ಹವಾಮಾನ ವರದಿಯನ್ನು ನೀಡುತ್ತದೆ. ರೈತರಿಗೆ ಇದರಿಂದ ತುಂಬಾ ಅನುಕೂಲವಾಗುತ್ತದೆ ಎಂದು ತಿಳಿಸಿದರು.

ರಾಜ್ಯ ಕಾರ್ಮಿಕ ಇಲಾಖೆ ಹಾಗೂ ಧಾರವಾಡ ಜಿಲ್ಲಾ ಉಸ್ತುವಾರಿ ಸಚಿವ ಸಂತೋಷ ಎಸ್. ಲಾಡ್, ಡಾ. ಸುದೇಶ ಜಗದೀಪ ಧನಕರ್ ಅವರು ವೇದಿಕೆಯಲ್ಲಿದ್ದರು.

ಧಾರವಾಡ ಕೃಷಿ ವಿಶ್ವವಿದ್ಯಾಲಯದ ಕುಲಪತಿ ಡಾ. ಪಿ.ಎಲ್. ಪಾಟೀಲ ಸ್ವಾಗತಿಸಿದರು. ವಿಶ್ವವಿದ್ಯಾಲಯ ವ್ಯವಸ್ಥಾಪನಾ ಮಂಡಳಿ ಸದಸ್ಯರಾದ ಬಸವರಾಜ ಕುಂದಗೋಳಮಠ, ರವಿಕುಮಾರ ಮಾಳಿಗೇರ, ಪಾರ್ವತಿ ಕುರ್ಲೆ, ಶ್ರೀನಿವಾಸ ಕೋಟ್ಯಾನ್ ಸೇರಿದಂತೆ ಇತರ ಸದಸ್ಯರು, ಜಿಲ್ಲಾಧಿಕಾರಿ ದಿವ್ಯ ಪ್ರಭು, ಮಹಾನಗರ ಪೊಲೀಸ್ ಆಯುಕ್ತ ಎನ್.ಶಶಿಕುಮಾರ, ಪೊಲೀಸ್ ವರಿಷ್ಠಾಧಿಕಾರಿ ಡಾ. ಗೋಪಾಲ ಬ್ಯಾಕೋಡ ಸೇರಿದಂತೆ ಹಿರಿಯ ಅಧಿಕಾರಿಗಳು, ಕೃಷಿ ವಿವಿ ವಿಶ್ರಾಂತ ಕುಲಪತಿಗಳು, ಪ್ರಾಧ್ಯಾಪಕರು, ಅಧಿಕಾರಿಗಳು, ಹಳೆಯ ವಿದ್ಯಾರ್ಥಿಗಳು ಸಮಾರಂಭದಲ್ಲಿ ಅಪಾರ ಸಂಖ್ಯೆಯಲ್ಲಿ ಭಾಗವಹಿಸಿದ್ದರು.

ಪ್ರಧಾನಿ ನರೇಂದ್ರ ಮೋದಿ ಅವರ ನೇತೃತ್ವದ ಕೇಂದ್ರ ಸರಕಾರ ಕೃಷಿ ವಲಯಕ್ಕೆ ಆದ್ಯತೆ ನೀಡಿದ್ದು, ಪ್ರಸಕ್ತ ವರ್ಷ ಕೇಂದ್ರ ಬಜೆಟ್‌ದಲ್ಲಿ 127 ಸಾವಿರ ಕೋಟಿ ರೂ.ಗಳ ಹಣ ಪೂರೈಸಿದೆ. ಸಕ್ಕರೆ ಉತ್ಪಾದನೆ, ತೈಲ ಉತ್ಪಾದನೆ ಮತ್ತು ನವೀಕರಿಸಬಹುದಾದ ಇಂಧನಗಳ ಹೆಚ್ಚಳಕ್ಕೆ ಅಗತ್ಯವಿರುವ ಕಚ್ಚಾವಸ್ತುಗಳ ಉತ್ಪಾದನೆ, ಸಂಸ್ಕರಣೆ ಪೂರಕವಾದ ಯೋಜನೆ ಕಾರ್ಯಕ್ರಮಗಳನ್ನು ಹೆಚ್ಚು ಹೆಚ್ಚು ಜಾರಿಗೊಳಿಸಲಾಗಿದೆ ಎಂದು ಕೇಂದ್ರ ಸಚಿವ ಪ್ರಹ್ಲಾದ ಜೋಶಿ ಹೇಳಿದರು.

ಕೋಟ್ಪಾ ಕಾಯ್ದೆ ಉಲ್ಲಂಘನೆ ವಿರುದ್ಧ ಒಟ್ಟು 30 ಪ್ರಕರಣ

## ಕಾಯ್ದೆ ಉಲ್ಲಂಘಿಸಿದವರಿಗೆ ಎಚ್ಚರಿಕೆ



■ವಿಜಯಸಾಕ್ಷಿ ಸುದ್ದಿ, ಗದಗ

ಜಿಲ್ಲಾ ಸಮೀಕ್ಷಣಾಧಿಕಾರಿ ಡಾ.ವೆಂಕಟೇಶ ರಾಥೋಡ್ ಮಾರ್ಗದರ್ಶನ, ರೋಣ ತಾಲೂಕಾ ಆರೋಗ್ಯಧಿಕಾರಿಗಳ ನೇತೃತ್ವದಲ್ಲಿ ತಾಲೂಕಾ ತನಿಖಾ ದಳ ರೋಣ ಹಾಗೂ ಜಿಲ್ಲಾ ತಂಬಾಕು ನಿಷೇಧ ಕೋಶ ಗದಗ ಇವರು ಶುಕ್ರವಾರ ಜಂಟಿ-ಯಾಗಿ ತಾಲೂಕಿನ ಚಿಕ್ಕಮಣ್ಣೂರು ಗ್ರಾಮದಲ್ಲಿ ಕೋಟ್ಪಾ ಕಾಯ್ದೆ ಉಲ್ಲಂಘನೆಯ ವಿರುದ್ಧ ಕಾರ್ಯಾಚರಣೆ ಹಮ್ಮಿಕೊಂಡು ತಂಬಾಕು ನಿಯಂತ್ರಣಕಾಯ್ದೆ ಕೋಟ್ಪಾ-2003ರ ಕುರಿತು ಮಾಹಿತಿ ಹಾಗೂ ಜಾಗೃತಿ ಮೂಡಿಸಿ ಉಲ್ಲಂಘನೆ ಮಾಡಿದವರ ವಿರುದ್ಧ ಎಚ್ಚರಿಕೆ ನೀಡಿ ಒಟ್ಟು 30 ಪ್ರಕರಣ ದಾಖಲಿಸಿ ರೂ. 2950/- ದಂಡ ಸಂಗ್ರಹಿಸಿದರು.

ಕೋಟ್ಪಾ ಕಾಯ್ದೆ ಪ್ರಕಾರ ಸಾರ್ವಜನಿಕ ಸ್ಥಳಗಳಲ್ಲಿ ಧೂಮಪಾನ ನಿಷೇಧದ ಕುರಿತು ಪ್ರತಿಯೊಂದು ಸಾರ್ವಜನಿಕ ಸ್ಥಳಗಳಲ್ಲಿ ನಾಮಫಲಕ ಬಿತ್ತರಿಸುವದು ಆ ಸ್ಥಳದ ಮಾಲೀಕರ ಜವಾಬ್ದಾರಿಯಾಗಿರುತ್ತದೆ. ಕೆಲವು ಅಂಗಡಿಗಳ ಹಿಂದೆ ಧೂಮಪಾನ ಅನಧಿಕೃತ ಅಡ್ಡಾಗಳನ್ನು ಮಾಡಿಕೊಂಡಿದ್ದು, ಅವರ ವಿರುದ್ಧ ಕೂಡಾ ಕ್ರಮ ವಹಿಸಲಾಯಿತು. ಸಾರ್ವಜನಿಕ ಸ್ಥಳಗಳಲ್ಲಿ ಧೂಮಪಾನ ಮಾಡುವುದರಿಂದ ಸಾರ್ವಜನಿಕರೊಂದಿಗೆ ಆ ಸ್ಥಳದ ಮಾಲೀಕ ಕೆಲಸಗಾರರ ಆರೋಗ್ಯದ ಮೇಲೆ ಪರಿಣಾಮ ಬೀರುತ್ತಿರುವದು ಕಂಡುಬಂದಿದೆ. ತಂಬಾಕು ಉತ್ಪನ್ನಗಳ ಕಾಣುವಂತೆ ಪ್ರದರ್ಶಿಸುವುದು, ಅವುಗಳ ಕುರಿತು ಜಾಹಿರಾತು ನಿಷೇಧ, 18 ವರ್ಷದೊಳಗಿನವರಿಗೆ ತಂಬಾಕು ನಿಷೇಧ ಈ ಕುರಿತು ನಾಮಫಲಕ ಬಿತ್ತರಿಸುವದು, ತಂಬಾಕು ಉತ್ಪನ್ನಗಳ ಪ್ಯಾಕ್ ಮೇಲೆ ಶೇ 85ರಷ್ಟು ಆರೋಗ್ಯ ಎಚ್ಚರಿಕೆ ಚಿಹ್ನೆ, ಶಾಲಾ ಕಾಲೇಜು ಸುತ್ತ 100 ಗಜದವರೆಗೆ ತಂಬಾಕು ನಿಷೇಧ, ಎಲ್ಲಾ ಶಾಲಾ/ಕಾಲೇಜುಗಳ ತಂಬಾಕು ಮುಕ್ತವನ್ನಾಗಿಸುವ ನಿಟ್ಟಿನಲ್ಲಿ 100 ಗಜದೊಳಗಿನ ತಂಬಾಕು ಮಾರಾಟ ಬಳಕೆ ಸಂಪೂರ್ಣ ನಿಷೇಧಗೊಳಿಸಲಾಗಿದ್ದು ಮುಂದಿನ ದಿನಗಳಲ್ಲಿ ಅಂತಹ ಪ್ರಕರಣ ಕಂಡುಬಂದಲ್ಲಿ ಕಠಿಣ ಕಾನೂನು ಕ್ರಮ ಕೈಗೊಳ್ಳಲಾಗುವುದು. ಕೋಟ್ಪಾ ಕಾಯ್ದೆಯನ್ನು ಎಲ್ಲರೂ ಕಟ್ಟುನಿಟ್ಟಾಗಿ ಪಾಲಿಸಬೇಕಾಗಿದೆ ಎಂದು ವಿವರಿಸಿದರು.

ಈ ಸಂದರ್ಭದಲ್ಲಿ ಆರೋಗ್ಯ ಇಲಾಖೆಯ ಜಿಲ್ಲಾ ತಂಬಾಕು ನಿಯಂತ್ರಣ ಕೋಶದ ಜಿಲ್ಲಾ ಸಲಹೆಗಾರ ಗೋಪಾಲ ಸುರಪುರ, ತಾಲೂಕಾ ಆರೋಗ್ಯ ಶಿಕ್ಷಣಾಧಿಕಾರಿ ಕೆ.ಎ. ಹಾದಿಮನಿ, ಜಿಲ್ಲಾ ತಂಬಾಕು ನಿಯಂತ್ರಣ ಕೋಶ ಸಾಮಾಜಿಕ ಕಾರ್ಯಕರ್ತೆ ಬಸಮ್ಮ ಚಿತ್ತರಗಿ, ಹಿರಿಯ ಆರೋಗ್ಯ ನಿರೀಕ್ಷಣಾಧಿಕಾರಿ ಬಿ.ಆರ್. ಪಾಟೀಲ ಹಾಗೂ ಪೊಲೀಸ್ ಇಲಾಖೆಯ ಎಮ್.ಎಸ್. ದೊಡ್ಡಮನಿ ಹಾಜರಿದ್ದರು.



ಗದಗ ಜಿಲ್ಲೆಗೆ ನೂತನವಾಗಿ ಜಿಲ್ಲಾಧಿಕಾರಿಗಳಾಗಿ ಆಗಮಿಸಿದ ಸಿ.ಎನ್. ಶ್ರೀಧರ್ ಅವರನ್ನು ಅಖಿಲ ಕರ್ನಾಟಕ ಮಾಜಿ ಸೈನಿಕರ ಸಂಘ ಗದಗ ಜಿಲ್ಲಾಧ್ಯಕ್ಷ ಬಸಲಿಂಗಪ್ಪ ಮುಂಡರಗಿ ಹಾಗೂ ಎಲ್ಲಾ ಪದಾಧಿಕಾರಿಗಳ ನೇತೃತ್ವದಲ್ಲಿ ಸನ್ಮಾನಿಸಿ ಗೌರವಿಸಲಾಯಿತು. ಈ ಸಂದರ್ಭದಲ್ಲಿ ಅಧ್ಯಕ್ಷರು ಸೇರಿದಂತೆ ಎಲ್ಲಾ ಪದಾಧಿಕಾರಿಗಳು, ಸರ್ವ ಸದಸ್ಯರು, ಎಲ್ಲಾ ವೀರನಾರಿಯರು ಹಾಗೂ ಅರೆಸೇನಾಪಡೆಗಳ ಯೋಧರು ಉಪಸ್ಥಿತರಿದ್ದರು.

ರಾಜ್ಯ ಪತ್ರಕರ್ತರ 39ನೇ ರಾಜ್ಯ ಸಮ್ಮೇಳನವನ್ನು ಉದ್ಘಾಟಿಸಿದ ಸಿ.ಎಂ ಸಿದ್ದರಾಮಯ್ಯ

# ಮೌಲ್ಯಾಧಾರಿತ ಸುದ್ದಿ ಇಂದಿನ ಅಗತ್ಯ

■ವಿಜಯಸಾಕ್ಷಿ ಸುದ್ದಿ, ತುಮಕೂರು

ವರದಿಗಾರಿಕೆ ವೃತ್ತಿಪರವಾಗಿದ್ದಾಗ ಸಮಾಜದ ಪರವಾಗಿರುತ್ತದೆ. ಪತ್ರಿಕಾ ವೃತ್ತಿ ಉದ್ಯಮವಾದ ಕೂಡಲೇ ಇದರ ಉದ್ದೇಶಗಳು ಬದಲಾಗುತ್ತವೆ. ವಸ್ತು ಸ್ಥಿತಿ ಜೊತೆಗೆ ಮೌಲ್ಯಧಾರಿತ ಸುದ್ದಿ ಇಂದಿನ ಅಗತ್ಯ. ಊಹಾ ಪತ್ರಿಕೋದ್ಯಮ ಅಪಾಯಕಾರಿ ಎಂದು ಸಿ.ಎಂ ಸಿದ್ದರಾಮಯ್ಯ ಕರೆ ನೀಡಿದರು.

ಕಾರ್ಯನಿರತ ಪತ್ರಕರ್ತರ ಸಂಘ ತುಮಕೂರು ಸಿದ್ಧಾರ್ಥ ತಾಂತ್ರಿಕ ವಿಶ್ವ ವಿದ್ಯಾಲಯದಲ್ಲಿ ಆಯೋಜಿಸಿದ್ದ ರಾಜ್ಯ ಪತ್ರಕರ್ತರ 39ನೇ ರಾಜ್ಯ ಸಮ್ಮೇಳನವನ್ನು ಉದ್ಘಾಟಿಸಿ ಅವರು ಮಾತನಾಡಿದರು.

ಸಂವಿಧಾನದ ಆಶಯಗಳನ್ನು ಈಡೇರಿಸುವುದೇ ಪತ್ರಿಕಾ ವೃತ್ತಿಯ ಕರ್ತವ್ಯ. ಧ್ವನಿ ಇಲ್ಲದವರ ಪರವಾಗಿ ವೃತ್ತಿ ಇದ್ದಾಗ ಸಮಾಜಕ್ಕೆ ಅನುಕೂಲ. ಸಮಾಜದಲ್ಲಿರುವ ಮೇಲು, ಕೆಳ ಜಾತಿಗಳ ನಡುವಿನ ತಾರತಮ್ಯ ಮತ್ತು ಅಸಮಾನತೆ ಕೊನೆಯಾಗುವ ದಿಕ್ಕಿನಲ್ಲಿ ಕರ್ತವ್ಯ ನಿರ್ವಹಿಸಿ ಎಂದು ಕರೆ ನೀಡಿದರು.

ರಾಜ್ಯದ ಪತ್ರಕರ್ತ ಸಮುದಾಯದ ವೃತ್ತಿಪರ ಸಮಸ್ಯೆಗಳಿಗೆ ಅತ್ಯಂತ ಸಹೃದಯತೆಯಿಂದ ಸ್ಪಂದಿಸಿ, ಪರಿಹಾರ ಒದಗಿಸಿಕೊಡುತ್ತಿರುವುದರ ಜೊತೆಗೆ ಸಮ್ಮೇಳನದ ಯಶಸ್ಸಿಗೆ ಸಕಲ ರೀತಿಯಲ್ಲಿ ಸಹಕಾರ ನೀಡಿದ ಮುಖ್ಯಮಂತ್ರಿಗಳ ಮಾಧ್ಯಮ ಸಲಹೆಗಾರ ಕೆ.ವಿ. ಪ್ರಭಾಕರ್ ಅವರಿಗೆ ಕಾರ್ಯನಿರತ ಪತ್ರಕರ್ತರ ಸಂಘ ಮತ್ತು ಸಮ್ಮೇಳನ ವಿಶೇಷ ಅಭಿನಂದನೆ ಸಲ್ಲಿಸಿತು.




ಜನ ಪತ್ರಕರ್ತರ ಮೇಲೆ ನಂಬಿಕೆ ಇಟ್ಟಿದ್ದಾರೆ. ಮೌಢ್ಯದ ಸುದ್ದಿಗಳನ್ನು, ಚರ್ಚೆಗಳನ್ನು ನಡೆಸಿ ನೋಡುಗರ, ಓದುಗರ ದಾರಿ ತಪ್ಪಿಸಬೇಡಿ. ವಿಜ್ಞಾನ, ತಂತ್ರಜ್ಞಾನದ ವೇಗದಲ್ಲೇ ಪತ್ರಿಕೋದ್ಯಮ ಬೆಳೆಯುತ್ತಿದೆ. ಇದು ಅವಕಾಶ, ಸವಾಲು ಎರಡೂ ಆಗಿದೆ ಎಂದರು.

ದೇಶದ ಪ್ರತಿಯೊಬ್ಬರೂ ಸಂವಿಧಾನ ಓದಬೇಕು. ಆಗ ಹಕ್ಕು-ಕರ್ತವ್ಯ ಎರಡೂ ಗೊತ್ತಾಗುತ್ತದೆ. ನಿಮ್ಮದು ಶಕ್ತಿಯುತ ಮಾಧ್ಯಮ. ಜನ ನಿಮ್ಮ ಕಡೆ ನೋಡುತ್ತಾ ಇದ್ದಾರೆ. ಈ ಎಚ್ಚರಿಕೆ ಸದಾ ಇರಲಿ ಎಂದರು.

ಗ್ರಾಮೀಣ ಪತ್ರಕರ್ತರ ಉಚಿತ ಬಸ್ ಪಾಸ್ ಸದ್ಯದಲ್ಲೇ ನಿಮ್ಮ ಕೈ ಸೇರಲಿದೆ. ಪತ್ರಕರ್ತರ ಕುಟುಂಬಕ್ಕೆ ಆರೋಗ್ಯ ವಿಮೆ ನೀಡುವ ಬಗ್ಗೆ ತೀರ್ಮಾನ ಮಾಡಲಾಗುವುದು. ಪತ್ರಕರ್ತರ ಮಾಸಾಶನವನ್ನೂ 3 ಸಾವಿರದಿಂದ 12 ಸಾವಿರಕ್ಕೆ ಹೆಚ್ಚಿಸಲಾಗಿದೆ ಎಂದರು.

ಪತ್ರಕರ್ತರ 39ನೇ ರಾಜ್ಯ ಸಮ್ಮೇಳನದ ಉದ್ಘಾಟನಾ ಭಾಷಣದ ವೇಳೆ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಸಹಕಾರಿ ಸಚಿವ ಕೆ.ಎನ್. ರಾಜಣ್ಣ ಅವರಿಗೆ ಮನುಸ್ಮೃತಿ ಓದಲು ಹೇಳಿದ ಪ್ರಸಂಗ ನಡೆಯಿತು.

ಮುಖ್ಯಮಂತ್ರಿಗಳು ತಮ್ಮ ಭಾಷಣದಲ್ಲಿ ಸಮಾಜದಲ್ಲಿರುವ ಜಾತಿ ತಾರತಮ್ಯವನ್ನು ಉಲ್ಲೇಖಿಸಿ ಮಾತನಾಡುವಾಗ 'ಮೇಲು ಜಾತಿ-ಕೆಳ ಜಾತಿ' ಎನ್ನುವ ಪದ ಬಳಸಿದರು. ಈ ವೇಳೆ ಸಚಿವ ರಾಜಣ್ಣ ಅವರು ಮೇಲು ಜಾತಿ-ಕೆಳ ಜಾತಿ ಎನ್ನುವ ಬದಲಿಗೆ ಮುಂದುವರೆದವರು, ಹಿಂದುಳಿದವರು ಎಂದು ಹೇಳಬಹುದು ಎಂದರು.

ಇದಕ್ಕೆ ಆಕ್ಷೇಪಿಸಿದ ಸಿಎಂ, ಜಾತಿ ಅನ್ನುವುದು ಈ ಸಮಾಜದ ವಾಸ್ತವ. ನೀನು ಮನುಸ್ಮೃತಿ ಓದಿದರೆ ಈ ಬಗ್ಗೆ ಇನ್ನಷ್ಟು ಸ್ಪಷ್ಟವಾಗುತ್ತದೆ. ಜಾತಿಯ ತಾರತಮ್ಯ ಎಷ್ಟು ಭೀಕರವಾಗಿದೆ ಎಂದು ಗೊತ್ತಾಗಬೇಕಾದರೆ ಅದಕ್ಕೆ ಮನುಸ್ಮೃತಿ ಓದು ಎಂದರು.

ಮುಖ್ಯಮಂತ್ರಿಗಳ ಮಾಧ್ಯಮ ಸಲಹೆಗಾರ ಕೆ.ವಿ. ಪ್ರಭಾಕರ್, ಗೃಹ ಸಚಿವ ಜಿ.ಪರಮೇಶ್ವರ್, ಸಹಕಾರಿ ಸಚಿವ ಕೆ.ಎನ್. ರಾಜಣ್ಣ, ರಾಜ್ಯ ಸರಕಾರದ ದೆಹಲಿ ಪ್ರತಿನಿಧಿ ಟಿ.ಬಿ. ಜಯಚಂದ್ರ, ಕಾರ್ಯನಿರತ ಪತ್ರಕರ್ತರ ಸಂಘದ ರಾಜ್ಯಾಧ್ಯಕ್ಷ ಶಿವಾನಂದ ತಗಡೂರು ಸೇರಿ ಜಿಲ್ಲೆಯ ಶಾಸಕರು, ಪ್ರಮುಖರು ಮತ್ತು ಜಿಲ್ಲಾಡಳಿತದ ಅಧಿಕಾರಿಗಳು ಉಪಸ್ಥಿತರಿದ್ದರು.

ಗ್ರಾಮವಾಸಿಗಳ ಆಸ್ತಿ ನಿಖರತೆಗೆ ಡ್ರೋನ್ ಸಮೀಕ್ಷೆಗೆ ಸಚಿವ ಸಂತೋಷ ಲಾಡ್ ಚಾಲನೆ

# ಯೋಜನೆಯ ಯಶಸ್ವಿಗೆ ಸಾರ್ವಜನಿಕರ ಸಹಕಾರ ಮುಖ್ಯ

■ವಿಜಯಸಾಕ್ಷಿ ಸುದ್ದಿ, ಹುಬ್ಬಳ್ಳಿ

ಅನೇಕ ಗ್ರಾಮವಾಸಿಗಳು ಎಷ್ಟೋ ವರ್ಷದಿಂದ ಇದೇ ಜಾಗದಲ್ಲಿದ್ದರೂ ಅವರಲ್ಲಿ ಸರಿಯಾದ ಅಳತೆ ಇಲ್ಲ. ಇದರಿಂದ ವ್ಯಾಜ್ಯ, ಆರ್ಥಿಕ ನಷ್ಟಗಳು ಆಗುತ್ತಿದೆ. ಜಿಲ್ಲೆಯಲ್ಲಿ ಸ್ವಾಮಿತ್ವ ಯೋಜನೆ ಮೂಲಕ ಎಲ್ಲ 375 ಗ್ರಾಮಗಳನ್ನು ಡ್ರೋನ್ ಮೂಲಕ ಸರ್ವೆ ಮಾಡಿ, ಮಾಲಿಕರಿಗೆ ಅವರವರ ಆಸ್ತಿಯನ್ನು ನಿಖರವಾಗಿ ಗುರುತಿಸಲಾಗುತ್ತದೆ. ಇದಕ್ಕೆ ಗ್ರಾಮಸ್ಥರ, ಗ್ರಾಮ ಪ್ರತಿನಿಧಿಗಳ ಸಹಕಾರ ಮುಖ್ಯವಾಗಿದೆ ಎಂದು ಕಾರ್ಮಿಕ ಇಲಾಖೆ ಹಾಗೂ ಜಿಲ್ಲಾ ಉಸ್ತುವಾರಿ ಸಚಿವ ಸಂತೋಷ ಲಾಡ್ ಹೇಳಿದರು.

ಅವರು ಶನಿವಾರ ಬೆಳಿಗ್ಗೆ ಕಲಘಟಗಿ ತಾಲೂಕಿನ ಮಡಕಿಹೊನ್ನಳ್ಳಿ ಗ್ರಾಮದಲ್ಲಿ ಸ್ವಾಮಿತ್ವ ಯೋಜನೆಯಡಿ ಡ್ರೋನ್ ಸರ್ವೆ ಕಾರ್ಯಕ್ಕೆ ಚಾಲನೆ ನೀಡಿ ಮಾತನಾಡಿದರು.

ಗ್ರಾಮವಾಸಿಗಳ ಸಮಸ್ಯೆ ನಿವಾರಣೆಗೆ ರಾಜ್ಯ ಸರಕಾರ ರಾಜ್ಯದ ಪ್ರತಿ ಗ್ರಾಮವನ್ನು ಸ್ವಾಮಿತ್ವ ಯೋಜನೆಯಡಿ ಸಮಿಕ್ಷೆ ಮಾಡಿ, ಕಾನೂನಾತ್ಮಕವಾಗಿ ಗ್ರಾಮ ನಿವಾಸಿಗಳ ಆಸ್ತಿ ಗುರುತಿಸುವಿಕೆ ಮಾಡಲಾಗುತ್ತದೆ. ಇದರಿಂದ ಸಾರ್ವಜನಿಕರಿಗೆ ತುಂಬಾ ಅನುಕೂಲವಾಗಲಿದೆ ಎಂದು ಸಚಿವರು ಹೇಳಿದರು.



ಭೂದಾಖಲೆಗಳ ಇಲಾಖೆಯ ಉಪನಿರ್ದೇಶಕ ಮೋಹನ ಶಿವಣ್ಣವರ ಅವರು ಪ್ರಾಸ್ತಾವಿಕವಾಗಿ ಮಾತನಾಡಿ, ಕೇಂದ್ರ ಮತ್ತು ರಾಜ್ಯ ಸರಕಾರದ ಜಂಟಿ ಯೋಜನೆ ಇದಾಗಿದ್ದು, ಜಿಲ್ಲೆಯ ಎಲ್ಲ ಗ್ರಾಮಗಳಲ್ಲಿ ಡ್ರೋನ್ ಮೂಲಕ ಸಮಿಕ್ಷೆ ಮಾಡಿ ಆಸ್ತಿ ಗುರುತಿಸಲಾಗುತ್ತದೆ. ಭೂಮಾಪನ ಇಲಾಖೆಯ ಅಧಿಕಾರಿ ಮತ್ತು ಸಿಬ್ಬಂದಿಗಳು ಗ್ರಾಮಕ್ಕೆ ಆಗಮಿಸಿ, ನಿವಾಸಿಗಳ ಆಸ್ತಿ ದಾಖಲಿಸುವ ಕಾರ್ಯಕ್ಕೆ ಮತ್ತು ಗಡಿ ಗುರುತಿಸುವಿಕೆಗೆ ಸಹಕರಿಸಬೇಕು. ದಾಖಲಿಕರಣ ಪೂರ್ವದಲ್ಲಿ ಮಾಲೀಕರಿಗೆ ಆಕ್ಷೇಪಣೆಗಳಿದ್ದರೆ ಸಲ್ಲಿಸಲು 30 ದಿನಗಳ ಕಾಲವಾಕಾಶ ಇರುತ್ತದೆ.

ಹೊಸ ಯೋಜನೆ ಆಗಿರುವದರಿಂದ ಪರಸ್ಪರರಲ್ಲಿ ಸಮಸ್ಯೆ ಸಹಜ. ಊರಿನ ಪ್ರಮುಖರು, ಜನಪ್ರತಿನಿಧಿಗಳು ಸಹಕಾರ ನೀಡಿ ಸಮಸ್ಯೆ ಬಗೆಹರಿಸಬೇಕು. ಡ್ರೋನ್ ಮೂಲಕ ಏರಿಯಲ್ ಸರ್ವೆ ಮತ್ತು ರೊವರ್ ಸರ್ವೆ ಎರಡನ್ನೂ ಮಾಡಲಾಗುತ್ತದೆ. ಇದು ಭವಿಷ್ಯತ್ತಿನಲ್ಲಿ ಬಹಳಷ್ಟು ಉಪಯೋಗವಾಗುತ್ತದೆ ಎಂದು ಸಚಿವ ಸಂತೋಷ್ ಲಾಡ್ ಹೇಳಿದರು.

ಎಲ್ಲರೂ ಸಹಕಾರ ನೀಡಬೇಕೆಂದು ವಿನಂತಿಸಿದರು.

ಕಾರ್ಯಕ್ರಮದಲ್ಲಿ ತಹಸೀಲ್ದಾರ ವಿರೇಶ ಮುಳಗುಂದಮಠ, ಜಿಲ್ಲಾ ಗ್ಯಾರಂಟಿ ಯೋಜನಾ ಪ್ರಾಧಿಕಾರದ ಅಧ್ಯಕ್ಷ ಎಸ್.ಆರ್. ಪಾಟೀಲ, ಕಲಘಟಗಿ ಭೂದಾಖಲೆಗಳ ಸಹಾಯಕ ನಿರ್ದೇಶಕ ಮಂಜೇಶ್, ಮಡಕಿಹೊನ್ನಳ್ಳಿ ಗ್ರಾ.ಪಂ ಅಧ್ಯಕ್ಷ ಬಸವರಾಜ ಪರ್ವಾಪುರ, ಉಪಾಧ್ಯಕ್ಷೆ ರೇಣುಕಾ ಕುಬಿಹಾಳ, ಸದಸ್ಯರು ಮತ್ತು ಗ್ರಾಮದ ಪ್ರಮುಖರಾದ ಶಿವಪುತ್ರಪ್ಪ ಆಲದಕಟ್ಟಿ, ಮಂಜುನಾಥ ಮರಳ್ಳಿ, ಗ್ರಾ.ಪಂ ಅಭಿವೃದ್ಧಿ ಅಧಿಕಾರಿ ಶಂಭುಲಿಂಗ ಹೊಸಮನಿ, ಗ್ರಾಮಲೆಕ್ಕಾಧಿಕಾರಿ ಮಂಜುನಾಥ ಹಾಗೂ ಗ್ರಾಮಸ್ಥರು ಉಪಸ್ಥಿತರಿದ್ದರು.

ಪ್ರೊ. ಎಸ್.ಎಸ್. ಪಟ್ಟಣಶೆಟ್ಟರಿಗೆ 'ಸಮಾಜಸೇವಾಭೂಷಣ' ಪ್ರಶಸ್ತಿ ಪ್ರದಾನ

# ಶಿಕ್ಷಣ ಕ್ಷೇತ್ರದಲ್ಲಿ ಅದ್ಭುತ ಕ್ರಾಂತಿ

■ವಿಜಯಸಾಕ್ಷಿ ಸುದ್ದಿ, ಗದಗ

ತೋಂಟದಾರ್ಯ ವಿದ್ಯಾಪೀಠದ ಎಲ್ಲಾ ಶಿಕ್ಷಣ ಸಂಸ್ಥೆಗಳಿಗೆ ಭದ್ರ ಬುನಾದಿ ಹಾಕಿರುವ ಪ್ರೊ. ಎಸ್.ಎಸ್ ಪಟ್ಟಣಶೆಟ್ಟರು ಶಿಕ್ಷಣ ಕ್ಷೇತ್ರದಲ್ಲಿ ಅದ್ಭುತ ಕ್ರಾಂತಿ ಮಾಡಿದ್ದಾರೆ ಎಂದು ಡಾ.ತೋಂಟದ ಸಿದ್ಧರಾಮ ಮಹಾಸ್ವಾಮಿಗಳು ನುಡಿದರು.

ಅವರು ಇತ್ತೀಚೆಗೆ ಅಥಣಿಯ ಮೋಟಗಿಮಠದಲ್ಲಿ ಪೂಜ್ಯ ಲಿಂ.ಚನ್ನಬಸವ ಶಿವಯೋಗಿಗಳವರ ಲಿಂಗೈಕ್ಯ ಶತಮಾನೋತ್ಸವದ ಅಂಗವಾಗಿ ಜರುಗಿದ ಕಾರ್ಯಕ್ರಮದಲ್ಲಿ ಪ್ರೊ. ಎಸ್.ಎಸ್ ಪಟ್ಟಣಶೆಟ್ಟರಿಗೆ 'ಸಮಾಜಸೇವಾಭೂಷಣ' ಪ್ರಶಸ್ತಿ ಪ್ರದಾನ ಮಾಡಿ ಆಶೀರ್ವಚನ ನೀಡುತ್ತಿದ್ದರು.

ಪಟ್ಟಣಶೆಟ್ಟರ ಶೈಕ್ಷಣಿಕ ಪ್ರೀತಿ ಹಾಗೂ ಸಾಮಾಜಿಕ ಕಳಕಳಿ ಅನನ್ಯವಾಗಿದ್ದು, ತೋಂಟದಾರ್ಯ ಮಠದ ಸಂಸ್ಥೆಗಳನ್ನು ಹೆಮ್ಮರವಾಗಿ ಬೆಳೆಸಿದ ಶ್ರೇಯಸ್ಸು ಅವರಿಗೆ ಸಲ್ಲುತ್ತದೆ. ನಿರಪೇಕ್ಷ ಭಾವದಿಂದ ನಿರಂತರ ನಾಲ್ಕು ದಶಕಗಳಿಗೂ ಹೆಚ್ಚು ಕಾಲ ಶ್ರೀಯುತರು ತೋಂಟದಾರ್ಯ ಮಠಕ್ಕೆ ಸೇವೆ ಸಲ್ಲಿಸಿದ್ದಾರೆ. ಇಂದು ತೋಂಟದಾರ್ಯ ವಿದ್ಯಾಪೀಠದ ಅಡಿಯಲ್ಲಿ ನಾಡಿನ ವಿವಿಧ ಶೈಕ್ಷಣಿಕ ಸಂಸ್ಥೆಗಳಲ್ಲಿ 30 ಸಾವಿರಕ್ಕೂ ಅಧಿಕ ವಿದ್ಯಾರ್ಥಿಗಳು ವ್ಯಾಸಂಗ ಮಾಡುತ್ತಿದ್ದಾರೆ. ಇದು ಹೆಮ್ಮೆಯ ವಿಷಯವಾಗಿದೆ ಎಂದರು.



ಪಟ್ಟಣಶೆಟ್ಟರೊಂದಿಗೆ ಸನ್ಮಾನ ಸ್ವೀಕರಿಸಿದ ಜಮಖಂಡಿ ಶಾಸಕರು ಹಾಗೂ ಪ್ರಭುಲಿಂಗೇಶ್ವರ ಸಕ್ಕರೆ ಕಾರ್ಖಾನೆ ಸ್ಥಾಪಕರಾದ ಜಗದೀಶ ಗುಡಗುಂಟಿ ಹಾಗೂ ಧರ್ಮಸ್ಥಳ ಶಿಕ್ಷಣ ಸಂಸ್ಥೆಗಳ ಕಾರ್ಯದರ್ಶಿಗಳಾದ ಡಾ. ಅಜಿತ್ ಪ್ರಸಾದ್ ಅವರಿಗೂ ಸಮಾಜಸೇವಾ ಭೂಷಣ ಪ್ರಶಸ್ತಿ ಪ್ರದಾನ ಮಾಡಿರುವುದು ಅಭಿನಂದನೀಯ ಎಂದರು.

ಸಮಾರಂಭದ ನೇತೃತ್ವವನ್ನು ಮೋಟಗಿಮಠದ ಪ್ರಭು ಚೆನ್ನಬಸವ ಸ್ವಾಮೀಜಿ ವಹಿಸಿದ್ದರು. ಸಮಾರಂಭದಲ್ಲಿ ಸುಪ್ರೀಂಕೋರ್ಟ್‌ನ ನಿವೃತ್ತ ನ್ಯಾಯಮೂರ್ತಿಗಳಾದ ಶಿವರಾಜ ಪಾಟೀಲ ಹಾಗೂ ಗಡಿನಾಡು ಅಭಿವೃದ್ಧಿ ಪ್ರಾಧಿಕಾರದ ಮಾಜಿ ಅಧ್ಯಕ್ಷರಾದ ಡಾ. ಸೋಮಶೇಖರ, ಅಂತಾರಾಷ್ಟ್ರೀಯ ಬಸವ ಪ್ರತಿಷ್ಠಾನದ ಅಧ್ಯಕ್ಷರಾದ ಎಸ್.ಮಹದೇವಯ್ಯ ಹಾಗೂ ಲೋಕಸಭಾ ಸದಸ್ಯರಾದ ಪ್ರಿಯಾಂಕಾ ಸತೀಶ್ ಜಾರಕಿಹೊಳಿ ಭಾಗವಹಿಸಿದ್ದರು.

ಸಮಾರಂಭದಲ್ಲಿ ಪೂಜ್ಯರಾದ ಶಿವಮೊಗ್ಗ ಜಿಲ್ಲೆಯ ಆನಂದಪುರ ಮಠದ ಜಗದ್ಗುರುಗಳು, ಹುಕ್ಕೇರಿ ಮಠದ ಶ್ರೀಗಳು, ನಾಗನೂರು ಮಠದ ಶ್ರೀಗಳು, ಶೇಗುಣಶಿ ಶ್ರೀಗಳು ಹಾಗೂ ಬಿಜಾಪೂರದ ಸಿದ್ಧಾರೂಢ ಸ್ವಾಮಿಗಳು, ವಿನಯ್ ಗುರೂಜಿ ಮುಂತಾದವರು ಸಮ್ಮುಖ ವಹಿಸಿದ್ದರು.

## ಇರಾನ್ | ಸುಪ್ರೀಂ ಕೋರ್ಟ್‌ನ ಇಬ್ಬರು ನ್ಯಾಯಮೂರ್ತಿಗಳ ಗುಂಡಿಕ್ಕಿ ಹತ್ಯೆ; ವರದಿ

■ವಿಜಯಸಾಕ್ಷಿ ಸುದ್ದಿ, ಟೆಹ್ರಾನ್

ಇರಾನ್ ರಾಜಧಾನಿ ಟೆಹ್ರಾನ್‌ನ ಸುಪ್ರೀಂ ಕೋರ್ಟ್ ಕಟ್ಟಡದಲ್ಲಿ ಶನಿವಾರ (ಜ.18) ನಡೆದ ಗುಂಡಿನ ದಾಳಿಯಲ್ಲಿ ಇಬ್ಬರು ನ್ಯಾಯಮೂರ್ತಿಗಳು ಸಾವನ್ನಪ್ಪಿದ್ದಾರೆ ಎಂದು ಅಲ್ಲಿನ ರಾಜ್ಯ ಮಾಧ್ಯಮ ವರದಿ ಮಾಡಿದೆ.

"ಇಂದು ಬೆಳಿಗ್ಗೆ ಬಂದೂಕುಧಾರಿಯೊಬ್ಬ ಸುಪ್ರೀಂ ಕೋರ್ಟ್‌ಗೆ ನುಗ್ಗಿ ಇಬ್ಬರು ಧೈರ್ಯಶಾಲಿ ಮತ್ತು ಅನುಭವಿ ನ್ಯಾಯಾಧೀಶರ ಮೇಲೆ ಗುಂಡಿನ ದಾಳಿ ನಡೆಸಿದ್ದಾನೆ. ಘಟನೆಯಲ್ಲಿ ಇಬ್ಬರೂ ನ್ಯಾಯಾಧೀಶರು ಹುತಾತ್ಮರಾಗಿದ್ದಾರೆ. ದಾಳಿ ಮಾಡಿದಾತನೂ ಆತ್ಮಹತ್ಯೆ ಮಾಡಿಕೊಂಡಿದ್ದಾನೆ" ಎಂದು ನ್ಯಾಯಾಂಗದ ಮೀಝಾನ್ ಆನ್‌ಲೈನ್ ವೆಬ್‌ಸೈಟ್ ವರದಿ ಮಾಡಿದೆ.

ಹತ್ಯೆಗೀಡಾದ ಇಬ್ಬರು ನ್ಯಾಯಾಧೀಶರನ್ನು ಅಲಿ ರಝಿನಿ ಮತ್ತು ಮೊಹಮ್ಮದ್ ಮೊಘಿಸೆಹ್ ಎಂದು ಗುರುತಿಸಲಾಗಿದೆ. ಇವರು ರಾಷ್ಟ್ರೀಯ ಭದ್ರತೆ, ಬೇಹುಗಾರಿಕೆ ಮತ್ತು ಭಯೋತ್ಪಾದನೆಯ ವಿರುದ್ಧದ ಅಪರಾಧಗಳ ವಿರುದ್ಧ ಹೋರಾಡುವ ಪ್ರಕರಣಗಳಲ್ಲಿ ಕೆಲಸ ಮಾಡಿದ್ದಾರೆ ಎಂದು ಹೇಳಿದೆ.

ಹತ್ಯೆಯ ಹಿಂದಿನ ಉದ್ದೇಶ ತಕ್ಷಣ ಗೊತ್ತಾಗಿಲ್ಲ. ಆದರೆ, ದಾಳಿ ಮಾಡಿದ ವ್ಯಕ್ತಿಗೆ ಸಂಬಂಧಿಸಿದ ಯಾವುದೇ ಪ್ರಕರಣಗಳು ನ್ಯಾಯಾಲಯದಲ್ಲಿ ಇರಲಿಲ್ಲ ಮತ್ತು ಹತ್ಯೆಗೀಡಾದ ನ್ಯಾಯಾಧೀಶರು ವಿಚಾರಣೆ ನಡೆಸುತ್ತಿರಲಿಲ್ಲ. ಅಧಿಕಾರಿಗಳು ಘಟನೆ ಸಂಬಂಧ ತನಿಖೆ ಕೈಗೊಂಡಿದ್ದಾರೆ ಎಂದು ವರದಿ ವಿವರಿಸಿದೆ.

ದಾಳಿಯಲ್ಲಿ ಮತ್ತೊಬ್ಬ ವ್ಯಕ್ತಿ ಗಾಯಗೊಂಡಿದ್ದಾರೆ ಎಂದು ರಾಜ್ಯ ಸುದ್ದಿ ಸಂಸ್ಥೆ ಐಆರ್‌ಎನ್‌ಎ ವರದಿ ಮಾಡಿದೆ.

"ಶಸ್ತ್ರಸಜ್ಜಿತ ವ್ಯಕ್ತಿಯೊಬ್ಬ ಇಬ್ಬರು ನ್ಯಾಯಾಧೀಶರ ಕೋಣೆಗೆ ನುಗ್ಗಿ ಬಂದೂಕಿನಿಂದ ಗುಂಡು ಹಾರಿಸಿದ್ದಾನೆ ನ್ಯಾಯಾಂಗ ವಕ್ತಾರ ಅಸ್ಗರ್ ಜಹಾಂಗೀರ್ ಅವರು ರಾಜ್ಯ ದೂರದರ್ಶನಕ್ಕೆ ನೀಡಿದ ಹೇಳಿಕೆಯಲ್ಲಿ ತಿಳಿಸಿದ್ದಾರೆ.ವ

VIJAYA SAKSHI KANNADA DAILY MORNING Editor, Printer, Publisher, & Owned by : Hussainsab M. Shareefanavar, H.No. 130/154, Balaji Nagar, Near Ring Road, Gadag-582103, Dist : Gadag- Karnataka Printed at : Sai Printing Press, Near Joda Maruti Temple, Gadag-582101, Dist : Gadag- Karnataka